# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 47 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 02–09–2024 ಸೋಮವಾರ | ಪುಟ: 4 | ಬೆಲೆ : ರೂ.2–00
Volume - 02 Issue - 47 | Title- Code: KARKAN 28269 | Chitradurga | Date: 02-09-2024 Monday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಬಾಲ್ಯ ವಿವಾಹ ಎಂಬ ಪಿಡುಗು ತೊಲಗಿಸಲು ಕೈ ಜೋಡಿಸಿ 2

ಜೂನ್ ತಿಂಗಳಲ್ಲಿ 224.4 ಎಕರೆ ಒತ್ತುವರಿ ಜಮೀನು ಮರಳಿ ಸರ್ಕಾರದ ಸುಪರ್ದಿಗೆ 3

ವಾಲ್ಮೀಕಿಯವರ ಆದರ್ಶ ಸಮುದಾಯದ ಸರ್ವತೋಮುಖ ಅಭಿವೃದ್ಧಿಗೆ ಸದಾಪ್ರೇರಣೆ 4



ಸುದ್ದಿ, ಜಾಹಿರಾತಿಗೆ 9686622252


**ಶುಭ ನುಡಿ**

ಬಟ್ಟೆ ನೋಡಿ ಗೆಳೆತನ ಮಾಡಬೇಡ, ಗುಣ ನೋಡಿ ಗೆಳೆತನ ಮಾಡು , ಯಾಕೆಂದರೆ ಬಟ್ಟೆ ಹರಿದು ಹೋಗುವ ತನಕ ಮಾತ್ರ ಇರುತ್ತದೆ, ಗುಣ ಸಾಯುವವರೆಗೂ ಇರುತ್ತದೆ !!

» ಶುಭೋದಯ

### ಪ್ರತಿಭಾಪುರಸ್ಕಾರ ವಿದ್ಯಾರ್ಥಿಗಳ ಕ್ರಿಯಾಶೀಲತೆಗೆ ಪೂರಕ

# ಮಾದಿಗ ಸಮುದಾಯದ ಸರ್ವತೋಮುಖ ಅಭಿವೃದ್ಧಿಗೆ ಸರ್ಕಾರ ಬದ್ದ; ಸಚಿವ ಡಿ.ಸುಧಾಕರ

» ಚಳ್ಳಕೆರೆ

ಶೋಷಿತ ಸಮಾಜಕ್ಕೆ ಪ್ರಜ್ವಲದ ಬೆಳಕನ್ನು ನೀಡಿದ ಸಂವಿಧಾನಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್‌ರವರ ಆದರ್ಶಗಳು ಸಮಾಜಕ್ಕೆ ಶ್ರೀರಕ್ಷೆಯಾಗಿದೆ. ಯಾವುದೇ ಕಾರಣಕ್ಕೂ ಈ ಸಮುದಾಯ ಚಿಂತನೆ ಮಾಡುವ ಅಗತ್ಯವಿಲ್ಲ, ಸಮುದಾಯದ ಸರ್ವತೋಮುಖ ಅಭಿವೃದ್ದಿಗೆ ಸರ್ಕಾರ ಸದಾಶ್ರಮಿಸುತ್ತಿದೆ ಎಂದು ಜಿಲ್ಲಾ ಉಸ್ತುವಾರಿ, ಯೋಜನಾ ಮತ್ತು ಸಾಂಖ್ಯಿಕ ಇಲಾಖೆ ಸಚಿವ ಡಿ.ಸುಧಾಕರ್ ತಿಳಿಸಿದರು.



ದಲ್ಲಾಲರ ಸಮುದಾಯ ಭವನದಲ್ಲಿ ಜಿಲ್ಲಾ ಮಾದಿಗ ನೌಕರರ ಸಾಂಸ್ಕೃತಿಕ ಸಂಘದ ತಾಲ್ಲೂಕು ಘಟಕ ಹಾಗೂ ನಿವೃತ್ತ ಮಾದಿಗ ನೌಕರರ ಕ್ಷೇಮಾಭಿವೃದ್ದಿ ಸಂಘ ಸಂಯುಕ್ತಾಶ್ರಯದಲ್ಲಿ ನಡೆದ ಎಸ್‌ಎಸ್‌ಎಲ್‌ಸಿ, ಪಿಯುಸಿ ವಿದ್ಯಾರ್ಥಿಗಳಿಗೆ ಪ್ರತಿಭಾಪುರಸ್ಕಾರ ಹಾಗೂ ನಿವೃತ್ತ ನೌಕರರ ಸನ್ಮಾನ ಸಮಾರಂಭವನ್ನು ಜ್ಯೋತಿ ಬೆಳಗುವ ಮೂಲಕ ಉದ್ಘಾಟಿಸಿ ಮಾತನಾಡಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ತಾಲ್ಲೂಕುಮಾದಿಗನೌಕರರಕ್ಷೇಮಾಭಿವೃದ್ದಿ ಸಂಘದ ಅಧ್ಯಕ್ಷ ಡಿ.ಟಿ.ಜಗನ್ನಾಥ, ಮಾದಿಗ ನೌಕರ ಸಾಂಸ್ಕೃತಿಕ ಸಂಘ ಕಳೆದ 1998ರಲ್ಲಿ ಚಿತ್ರದುರ್ಗ ಜಿಲ್ಲೆಯಲ್ಲಿ ಉದ್ಘಾಟನೆಯಾಯಿತು. ಸಮುದಾಯದ ಪ್ರತಿಭಾವಂತ ಮಕ್ಕಳನ್ನು ಗುರುತಿಸಿ,ಗೌರವಿಸುವ ಕಾರ್ಯವನ್ನು ಮಾದಾರಚನ್ನಯ್ಯಸ್ವಾಮಿ ನೇತೃತ್ವದಲ್ಲಿ ಈ ಸಂಘಟನೆ ಆರಂಭಗೊಂಡಿದೆ. ಅಂದಿನಿಂದ ಇಂದಿನವರೆಗೂ ನಿರಂತರವಾಗಿ 37 ವರ್ಷಗಳ ಕಾಲ ಈ ಕಾರ್ಯವನ್ನು ಮಾಡುತ್ತಿದೆ. ಇದರಿಂದ ಸಮುದಾಯದ ವಿದ್ಯಾರ್ಥಿಗಳಲ್ಲಿ ಆತ್ಮಸ್ಥೈರ್ಯ ಹೆಚ್ಚಿದೆ ಎಂದರು.

ದಿವ್ಯಸಾನಿಧ್ಯ ವಹಿಸಿದ್ದ ಹಿರಿಯೂರು ಕೋಡಿಹಳ್ಳಿ ಆದಿಜಾಂಭವಶಾಖಾಮಠದ ಷಡಾಕ್ಷರಿಮುನಿದೇಶಿ ಕೇಂದ್ರಸ್ವಾಮೀಜಿ ಮಾತನಾಡಿ, ಸಮುದಾಯದ ಕ್ರಿಯಾಶೀಲ ಚಟುವಟಿಕೆಗೆ ಕೀಳಿರಿಮೆ ಎಂದಿಗೂ ಅಡ್ಡಿಯಾಗಬಾರದು. ಇಂದಿಗೂ ಈ ಸಮುದಾಯದ ಅಸಮಾನತೆ, ಅವಮಾನದಿಂದ ಕುಗ್ಗಿದೆ. ಮುಂದಿನ ದಿನಗಳಲ್ಲಾದರೂ ಸಮುದಾಯ ವಿದ್ಯಾರ್ಥಿಗಳ ಭವಿಷ್ಯಕ್ಕಾಗಿ ಇಂತಹ ಕಾರ್ಯಗಳಮೂಲಕಕ್ರಿಯಾಶೀಲತೆಯನ್ನು ಹೆಚ್ಚಿಸಬೇಕು ಎಂದರು.

ಪ್ರೊ.ಗುರುಮೂರ್ತಿ ಮಾತನಾಡಿ, ನೂರಾರು ವರ್ಷಗಳಿಂದ ಈ ಸಮುದಾಯದಲ್ಲಿ ವಿದ್ಯಾರ್ಥಿಗಳನ್ನು ಗುರುತಿಸಿಗೌರವಿಸುವ ಕಾರ್ಯ ನಡೆಯದೆ ಪ್ರತಿಭಾವಂತ ವಿದ್ಯಾರ್ಥಿಗಳು ಪ್ರತಿಭೆ ಇದ್ದರೂ ಹೊರಬರಲು ಸಾಧ್ಯವಾಗಿಲ್ಲ. ಆದರೆ, ಇತ್ತೀಚೆಗೆ ಬದಲಾದ ಕಾಲಪತಿಸ್ಥಿತಿಯಲ್ಲಿ ಈ ಸಮುದಾಯದ ವಿದ್ಯಾರ್ಥಿಗಳು ಪ್ರತಿಭೆಗೆ ಅರ್ಹರು ಎಂಬುವುದನ್ನು ಗುರುತಿಸಿಕೊಳ್ಳಲು ಸಾಧ್ಯವಾಗಿರುವುದಕ್ಕೆ ಸಂತಸವಾಗಿದೆ ಎಂದರು.

ಮಾದಿಗ ನೌಕರರ ಸಾಂಸ್ಕೃತಿಕ ಸಂಘ ತಾಲ್ಲೂಕು ಅಧ್ಯಕ್ಷ ಡಿ.ನಾಗರಾಜ ಮಾತನಾಡಿ, ಇಂದಿನ ಪ್ರತಿಭಾಪುರಸ್ಕಾರ ಕಾರ್ಯಕ್ರಮದಲ್ಲಿ 40 ಎಸ್‌ಎಸ್‌ಎಲ್‌ಸಿ, 20 ಪಿಯುಸಿ ಹಾಗೂ 15 ಸಮುದಾಯದ ನಿವೃತ್ತ ನೌಕರರನ್ನು ಸನ್ಮಾನಿಸಲಾಗಿದೆ. ಪ್ರತಿಭಾಪುರಸ್ಕಾರದ ಮೂಲಕ ಜನಾಂಗದ ಐಕ್ಯತೆಗೆ ಪ್ರಾಮಾಣಿಕ ಪ್ರಯತ್ನ ಮುಂದುವರೆದಿದೆ. ಸಮಾಜದ ಹಲವಾರು ಸಮಸ್ಯೆಗಳನ್ನು ಎದುರಿಸಿ ಅಭಿವೃದ್ಧಿ ಪಥದತ್ತ ನಾವೆಲ್ಲರೂ ಸಾಗಬೇಕು ಎಂದರು.

ಶಾಸಕ ಟಿ.ರಘುಮೂರ್ತಿ, ಮಾದಿಗ ಸಮುದಾಯ ಮೂರು ಬಾರಿ ನಾನು ಶಾಸಕನಾಗಲು ಉತ್ತಮ ಸಹಕಾರ ನೀಡಿದೆ. ಈ ಸಮುದಾಯದ ಅಭಿವೃದ್ಧಿಪರ ಚಿಂತನೆಗಳಿಗೆ ನನ್ನ ಸಹಕಾರ ಯಾವಾಗಲು ಇದೆ. ನಗರದ ಚಿತ್ರದುರ್ಗ ರಸ್ತೆಯ ಜಗಜೀವನರಾಂ ಭವನ ನಿರ್ಮಾಣ ಕಾರ್ಯ ಶೀಘ್ರದಲ್ಲೇ ಮುಕ್ತಾಯವಾಗಲಿದೆ. ಸಂಘದ ಪದಾಧಿಕಾರಿಗಳು ನಿವೇಶನದ ಬೇಡಿಕೆ ಸಲ್ಲಿಸಿದ್ದು, ಮುಂದಿನ ದಿನಗಳಲ್ಲಿ ಅದನ್ನು ಈಡೇರಿಸುವ ಪ್ರಾಮಾಣಿಕ ಪ್ರಯತ್ನ ಮಾಡುವೆಂದರು.

ಕಾರ್ಯಕ್ರಮದಲ್ಲಿ ನಗರಸಭೆ ಅಧ್ಯಕ್ಷೆ ಜೈತುಂಬಿ, ಉಪಾಧ್ಯಕ್ಷ ಓ.ಸುಜಾತ, ಸುಮಕ್ಕ, ಕೆ.ವೀರಭದ್ರಪ್ಪ, ಎಚ್.ತಿಪ್ಪೇಸ್ವಾಮಿ, ಬಿ.ಆನಂದಕುಮಾರ್, ನಾಗರಾಜು, ಕಾವ್ಯ, ಮುಖ್ಯ ಅಭಿಯಂತರ ಕೆ.ಬಿ.ಜಗದೀಶ್, ನಿವೃತ್ತ ಎಸಿ ಎಂ.ಮಲ್ಲಿಕಾರ್ಜುನ್, ಡಿ.ದಯಾನಂದ, ಡಿ.ಟಿ.ಶ್ರೀನಿವಾಸ್, ಎಚ್.ಗುರುಮೂರ್ತಿ, ಕ್ಷೇಮಾಭಿವೃದ್ದಿ ಸಂಘ ಗೌರವಾಧ್ಯಕ್ಷ ಟಿ.ಚೌಡಣ್ಣ, ಕಾರ್ಯದರ್ಶಿ ವೈ.ಆನಂದಮೂರ್ತಿ, ಉಪಾಧ್ಯಕ್ಷ ರಾಮಣ್ಣ, ಎಚ್.ಹನುಮಂತಪ್ಪ, ವಿಷ್ಣುವರ್ಧನ, ಎಸ್.ಬಿ.ತಿಪ್ಪೇಸ್ವಾಮಿ, ಡಿ.ಟಿ.ಹನುಮಂತರಾಯ, ಶ್ರೀನಿವಾಸ್, ಮುರಳಿ ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರ ಪ್ರವಾಸ



» ಚಿತ್ರದುರ್ಗ

ರಾಜ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಖಾತೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಅವರು ಸೆ. 02 ರಂದು ಚಿತ್ರದುರ್ಗ ಜಿಲ್ಲಾ ಪ್ರವಾಸ ಕಾರ್ಯಕ್ರಮ ಹಮ್ಮಿಕೊಂಡಿದ್ದಾರೆ. ಸಚಿವರು ಅಂದು ಬೆಳಿಗ್ಗೆ ಬೆಂಗಳೂರಿನಿಂದ ಹೊರಟು, 10.30 ಗಂಟೆಗೆ ಚಿತ್ರದುರ್ಗ ನಗರದ ಸರ್ಕಾರಿ ಅತಿಥಿ ಗೃಹಕ್ಕೆ ಆಗಮಿಸುವರು. ಬೆ. 11 ಗಂಟೆಗೆ ನಗರದ ಒನಕೆ ಓಬವ್ವ ಸರ್ಕಲ್‌ನಲ್ಲಿನ ಪಕ್ಷದ ಕಚೇರಿಗೆ ಭೇಟಿ ನೀಡುವರು. ಮಧ್ಯಾಹ್ನ 12 ಗಂಟೆಗೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಇಲಾಖೆಯ ಪ್ರಗತಿ ಪರಿಶೀಲನಾ ಸಭೆ ನಡೆಸುವರು.

### ವಿಶ್ವಕರ್ಮ ಜಯಂತಿ: ಸೆ.04 ರಂದು ಪೂರ್ವ ಸಭೆ

» ಚಿತ್ರದುರ್ಗ

ಜಿಲ್ಲಾ ಕೇಂದ್ರದಲ್ಲಿ ಬರುವ ಸೆ. 17 ರಂದು ವಿಶ್ವಕರ್ಮ ಜಯಂತಿ ಆಚರಿಸುವ ಸಂಬಂಧ ಸಿದ್ಧತೆಗಳನ್ನು ಕೈಗೊಳ್ಳಲು ಪೂರ್ವಭಾವಿ ಸಭೆ ಸೆ. 04 ರಂದು ಬೆಳಿಗ್ಗೆ 11.30 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆಯಲಿದೆ. ಸಭೆಯ ಅಧ್ಯಕ್ಷತೆಯನ್ನು ಜಿಲ್ಲಾಧಿಕಾರಿ ವೆಂಕಟೇಶ್ ಟಿ. ಅವರು ವಹಿಸುವರು. ಸಭೆಗೆ ಎಲ್ಲ ಸಮಾಜದ ಮುಖಂಡರು, ಸಂಬಂಧಿಸಿದ ಅಧಿಕಾರಿಗಳು ಭಾಗವಹಿಸಿ ಸಲಹೆ ಸೂಚನೆಗಳನ್ನು ನೀಡಬೇಕು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ರವಿಚಂದ್ರ ಅವರು ಕೋರಿದ್ದಾರೆ.

### ಗ್ರಾಮ ಸಹಾಯಕರ ಹುದ್ದೆ: ಅರ್ಜಿ ಸಲ್ಲಿಕೆ ಅವಧಿ ಸೆ.9 ರವರೆಗೆ ವಿಸ್ತರಣೆ

» ಚಿತ್ರದುರ್ಗ

ಹಿರಿಯೂರು ತಾಲ್ಲೂಕಿನ ಕಸಬ ಹೋಬಳಿಯ ಹುಚ್ಚವ್ವನಹಳ್ಳಿ, ಹಿರಿಯೂರು ಹಾಗೂ ಜೆ.ಜಿ.ಹಳ್ಳಿ ಹೋಬಳಿಯ ಕಾಟನಾಯಕನಹಳ್ಳಿ ಕಂದಾಯ ವೃತ್ತಗಳ ಗ್ರಾಮ ಸಹಾಯಕರ ಹುದ್ದೆಗೆ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸುವ ಅವಧಿಯನ್ನು ಸೆಪ್ಟೆಂಬರ್ 9 ರವರೆಗೆ ವಿಸ್ತರಿಸಲಾಗಿದೆ. ಗ್ರಾಮ ಸಹಾಯಕ ಹುದ್ದೆಯು ತಾತ್ಕಾಲಿಕ ಹುದ್ದೆಯಾಗಿದ್ದು, ಸರ್ಕಾರದಿಂದ ಕಾಲಕಾಲಕ್ಕೆ ನಿಗದಿಯಾಗುವಂತಹ ಗೌರವಧನ ಪಾವತಿಸಲಾಗುವುದು. ಅರ್ಹ ಅಭ್ಯರ್ಥಿಗಳಿಗೆ ಸಂದರ್ಶನ ನಡೆಸಿ ನೇಮಕಾತಿಗೆ ಕ್ರಮವಹಿಸಲಾಗುವುದು. ಅರ್ಹತೆಗಳು: ನಿಗದಿತ ನಮೂನೆ–1ರಲ್ಲಿ ಅರ್ಜಿ ಸಲ್ಲಿಸಬೇಕು. ಅಭ್ಯರ್ಥಿಗೆ ಅರ್ಜಿ ಸಲ್ಲಿಸುವ ದಿನಾಂಕಕ್ಕೆ 25 ವರ್ಷಗಳು ಪೂರ್ಣಗೊಂಡಿರಬೇಕು. ಅಕ್ಷರಸ್ಥರಾಗಿರುವ ಬಗ್ಗೆ ಸೂಕ್ತದಾಖಲಾತಿಗಳನ್ನುಲಗತ್ತಿಸುವುದು. ಸಾಮಾನ್ಯ ಕಂಪ್ಯೂಟರ್ ಸಾಕ್ಷರತೆಯ ತರಬೇತಿ ಪಡೆದಿರುವ ಕುರಿತು ಪ್ರಮಾಣ ಪತ್ರ ಲಗತ್ತಿಸುವುದು. ಈ ಹಿಂದೆ ಈ ಕಂದಾಯ ವೃತ್ತಕ್ಕೆ ಸೇರಿದ ಗ್ರಾಮಗಳಲ್ಲಿ ಕರ್ತವ್ಯ ನಿರ್ವಹಿಸಿದ ಕೆಳಮಟ್ಟದ ಗ್ರಾಮ ನೌಕರರ ವಂಶಸ್ಥರಿಗೆ ಆದ್ಯತೆ ನೀಡಲಾಗುವುದು. ಕೆಳಮಟ್ಟದ ನೌಕರರ ವಂಶಸ್ಥರೆಂಬುವ ಬಗ್ಗೆ ದಾಖಲೆ ಲಗತ್ತಿಸುವುದು. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದವರಿಗೆ ಮೊದಲನೇ ಆದ್ಯತೆ ನೀಡಲಾಗುವುದು. ಕ್ರಿಮಿನಲ್ ಮೊಕದ್ದಮೆ ಹಿನ್ನಲೆಯುಳ್ಳವರಾಗಿರಬಾರದು. ಕಂದಾಯ ವೃತ್ತಕ್ಕೆ ಸೇರಿದ ಗ್ರಾಮಗಳ ನಿವಾಸಿಯಾಗಿರಬೇಕು. ಹೆಚ್ಚಿನ ಮಾಹಿತಿಗಾಗಿ ಹಿರಿಯೂರು ತಹಶೀಲ್ದಾರ್ ಕಾರ್ಯಾಲಯ ಸಂಪರ್ಕಿಸಬಹುದು.

## ಗೌರಸಮುದ್ರಮಾರಮ್ಮದೇವಿ ಜಾತ್ರೆ: ಗ್ರಾಮಕ್ಕೆ ವೈದ್ಯಾಧಿಕಾರಿಗಳ ತಂಡ

» ಚಳ್ಳಕೆರೆ

ತಾಲ್ಲೂಕಿನ ಗೌರಸಮುದ್ರ ಮಾರಮ್ಮದೇವಿ ಜಾತ್ರೆ ಸೆ.2ರಿಂದ4ತನಕ ನಡೆಯಲಿದ್ದು, ತಾಲ್ಲೂಕು ಆಡಳಿತ, ಗ್ರಾಮ ಪಂಚಾಯಿತಿ ಹಾಗೂ ದೇವಸ್ಥಾನದ ಆಡಳಿತಮಂಡಳಿ ಜಾತ್ರೆ ಯಶಸ್ವಿಗೊಳಿಸುವ ಹಿನ್ನೆಲೆಯಲ್ಲಿ ಭಕ್ತಾಧಿಗಳಿಗೆ ಹೆಚ್ಚಿನ ಸೌಕರ್ಯ ಕಲ್ಪಿಸುವ ನಿಟ್ಟಿನಲ್ಲಿ ಪೂರ್ವಸಿದ್ಧತೆಯಲ್ಲಿ ತೊಡಗಿದ್ದಾರೆ.

ಕ್ಷೇತ್ರದ ಶಾಸಕ ಎನ್.ವೈ.ಗೋಪಾಲಕೃಷ್ಣ ಜಾತ್ರೆಗೆ ಬರುವ ಭಕ್ತರ ಆರೋಗ್ಯದ ಬಗ್ಗೆ ಮುಂಜಾಗ್ರತಾ ಕ್ರಮದ ಬಗ್ಗೆ ಸೂಚನೆ ನೀಡಿದ ಹಿನ್ನೆಲೆಯಲ್ಲಿ ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಎನ್.ಕಾಶಿ ಮತ್ತು ಸಿಬ್ಬಂದಿ ವರ್ಗ ಗ್ರಾಮಕ್ಕೆ ತೆರಳಿ ಪರಿಶೀಲನೆ ನಡೆಸಿದರು. ಪತ್ರಿಕೆಯೊಂದಿಗೆ ಮಾತನಾಡಿದ ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಎನ್.ಕಾಶಿ, ವಿಶೇಷವಾಗಿ ಜಾತ್ರಾ ಉತ್ಸವದಲ್ಲಿ ಭಕ್ತಾಧಿಗಳಿಗೆ ಶುದ್ದ ಕುಡಿಯುವ ನೀರು ಒದಗಿಸಬೇಕಿದೆ. ಈ ಹಿನ್ನೆಲೆಯಲ್ಲಿ ಈಗಾಗಲೇ ಗ್ರಾಮ ಪಂಚಾಯಿತಿ ಆಡಳಿತಕ್ಕೆ ಮಾಹಿತಿ ನೀಡಿದರು.



ಪುಟ 2



ಚಿತ್ರದುರ್ಗ ವಕೀಲರ ಸಂಘದಿಂದ ಸಂಸದ ಗೋವಿಂದ ಕಾರಜೋಳರವರಿಗೆ ಸನ್ಮಾನ

ಪುಟ 2

## ಪ್ರಮುಖ ಸುದ್ದಿ

### ಹೊಸದುರ್ಗದಲ್ಲಿ ಆಯೋಜಿಸಿದ್ದ ದೇವಲ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಶಾಸಕ ಬಿ.ಜಿ.ಗೋವಿಂದಪ್ಪ ಸಲಹೆ

# ಪ್ರತಿಭಾನ್ವಿತ ಮಕ್ಕಳನ್ನು ಪ್ರೋತ್ಸಾಹಿಸಿ, ದೇಶದ ಆಸ್ತಿಯನ್ನಾಗಿ ಮಾಡಿ

» ಹೊಸದುರ್ಗ

ಇದು ಸ್ಪರ್ಧಾತ್ಮಕ ಯುಗವಾಗಿದ್ದು, ಪ್ರತಿಯೊಂದು ಕೆಲಸಗಳು ಕೂಡ ಸ್ಪರ್ಧೆಯಲ್ಲಿಯೇ ನಡೆಯುತ್ತವೆ. ಒಂದು ಸಮುದಾಯ ಸರ್ವಾಂಗೀಣ ಅಭಿವೃದ್ಧಿ ಹೊಂದಬೇಕಾದರೆ, ಶೈಕ್ಷಣಿಕವಾಗಿ ಪ್ರಗತಿ ಸಾಧಿಸಬೇಕು. ದೇವಾಂಗ ಸಮಾಜ ಸಮುದಾಯ ಮತ್ತಷ್ಟು ಸದೃಢಗೊಳ್ಳಬೇಕಾದರೆ ಸಮುದಾಯದ ಪ್ರತಿಭಾನ್ವಿತ ಮಕ್ಕಳನ್ನ ಪ್ರೋತ್ಸಾಹಿಸಿ, ಉನ್ನತ ಮಟ್ಟಕ್ಕೆ ಬೆಳೆಸಬೇಕು ಎಂದು ಶಾಸಕ ಬಿ.ಜಿ.ಗೋವಿಂದಪ್ಪ ಸಲಹೆ ನೀಡಿದರು.



ಪಟ್ಟಣದ ಶ್ರೀ ಬನಶಂಕರಿ ಸಮುದಾಯ ಭವನದಲ್ಲಿ ತಾಲೂಕು ದೇವಾಂಗ ಸಂಘ, ದೇವಾಂಗ ಸಮಾಜ ಹಾಗೂ ದೇವಾಂಗ ನೌಕರರ ಸಂಘದ ವತಿಯಿಂದ ಭಾನುವಾರ ಪ್ರತಿಭಾನ್ವಿತರಿಗೆ ಪ್ರತಿಭಾ ಪುರಸ್ಕಾರ, ನಿವೃತ್ತ ನೌಕರರಿಗೆ ಸನ್ಮಾನ ಹಾಗೂ ಅಭಿನಂದನೆ ಸಮಾರಂಭ ನಡೆಯಿತು.

ದೀಪ ಬೆಳಗಿಸುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿದ ಶಾಸಕರಾದ ಬಿ.ಜಿ.ಗೋವಿಂದಪ್ಪ ಅವರು ಮಾತನಾಡಿ, ದೇವಾಂಗ ನೌಕರರು ಪ್ರತಿಭಾವಂತರನ್ನು ಗುರುತಿಸುವ ಕೆಲಸವನ್ನು ಮಾಡುತ್ತ ಬರುತ್ತಿರುವುದು ಶ್ಲಾಘನೀಯ. ಈ ಬಾರಿ ಪುರಸ್ಕಾರಕ್ಕೆ ಭಾಜನ ಆಗದಿರುವ ಮಕ್ಕಳು ಮುಂದಿನ ದಿನದಲ್ಲಿ ಪುರಸ್ಕಾರ ಪಡೆಯುವಂತೆ ವಿದ್ಯಾಭ್ಯಾಸ ಮಾಡಬೇಕು. ಪೋಷಕರು ಹಾಗೂ

ಶಿಕ್ಷಕರು ತಮ್ಮ ಮಕ್ಕಳಿಗೆ ವಿದ್ಯೆ ಜೊತೆಗೆ ಸಂಸ್ಕಾರದ ಪಾಠ ಕಳಿಸುವುದು ಬಹಳ ಮುಖ್ಯ. ಏಕೆಂದರೆ ಸಂಸ್ಕಾರ ಇಲ್ಲದೇ ಹೋದರೆ ಭವಿಷ್ಯದ ಜೀವನ ಕಷ್ಟವಾಗುತ್ತದೆ. ಇಂದು ಪೋಷಕರು ತಾವು ದುಡಿದ ಹಣ ಖರ್ಚು ಮಾಡಿ, ಮಕ್ಕಳಿಗೆ ವಿದ್ಯೆ ಕೊಟ್ಟು ಸಂಸ್ಕಾರ ಕಲಿಸದಿದ್ದರೆ ತಾವು ವಯಸ್ಸಾದಾಗ ವೃದ್ಧಾಶ್ರಮಕ್ಕೆ ಹೋಗಬೇಕಾಗುತ್ತದೆ. ಇದರಿಂದ ಕುಟುಂಬ ಹಾಗೂ ಸಮಾಜಕ್ಕೆ ನಷ್ಟ ಉಂಟಾಗುತ್ತದೆ. ಪ್ರತಿಭಾನ್ವಿತರು ಸಮಾಜ ಮತ್ತು ದೇಶಕ್ಕೆ ಆಸ್ತಿ ಆಗಬೇಕಾದರೆ ಸಂಸ್ಕಾರ ಮುಖ್ಯ. ದೇವಾಂಗ ಸಮಾಜದವರು ಸಾಧಕರನ್ನು ಬೆನ್ನು ತಟ್ಟುವ ಕೆಲಸ ಮಾಡುತ್ತಿರುವುದು ಹೆಮ್ಮೆಯ ಸಂಗತಿ. ತಾವು ಪಡೆದ ವಿದ್ಯೆಗೆ ಬೆಲೆ ಸಿಗಬೇಕಾದರೆ ಸಂಸ್ಕಾರವಂತರಾಗಿ ಉನ್ನತ ಸ್ಥಾನಕ್ಕೆ ಹೋಗಬೇಕು. ಹೆತ್ತ ತಂದೆತಾಯಿಗೆ ಹೆಸರನ್ನು ತರಬೇಕು ಎಂದು ಕಿವಿಮಾತು ಹೇಳಿದರು.

ಹೊಸದುರ್ಗ ದೇವಾಂಗ ಸಮಾಜದ ಅಧ್ಯಕ್ಷ ಡಿ.ಆರ್.ಗೋವಿಂದರಾಜು ಮಾತನಾಡಿ, ಹಣ, ಆಸ್ತಿಮಾಡುವುದೊಂದೇ ಮುಖ್ಯವಲ್ಲ. ಸಮಾಜ ಅಂತ ಬಂದಾಗ ಪಕ್ಷಬೇಧ ಮರೆತು ಸಂಘಟಿತರಾಗಿ ಒಗ್ಗಟ್ಟು ಪ್ರದರ್ಶಿಸಿದಲ್ಲಿ ಮಾತ್ರ ಮುಂದಿನ ದಿನದಲ್ಲಿ ಸಮುದಾಯದ ಅಭಿವೃದ್ಧಿ ಸಾಧ್ಯ. ನೌಕರರ ಸಂಘದಿಂದ ನಡೆಸುತ್ತಿರುವ ಇಂತಹ ಮುಖ್ಯವಾದ ಕಾರ್ಯಕ್ರಮಕ್ಕೆ ಸ್ಥಳೀಯವಾಗಿ ಇರುವ ನೌಕರರು, ಅವರ ಮಕ್ಕಳು ಬರದಿದ್ದರೆ ಹೇಗೆ?. ಮುಂದಿನ ದಿನದಲ್ಲಿ ಈ ರೀತಿ ಆಗದಂತೆ ಎಲ್ಲರೂ ಜಾಗೃತರಾಗಬೇಕು ಎಂದು ತಿಳಿಸಿದರು.

ದೇವಾಂಗ ಸಂಘದ ತಾಲೂಕು ಅಧ್ಯಕ್ಷ ಗೋ.ತಿಪ್ಪೇಶ್ ಮಾತನಾಡಿ, ಪ್ರತಿಭೆ ಯಾರಪ್ಪನ ಸ್ವತ್ತು ಅಲ್ಲ. ಪ್ರತಿಭಾನ್ವಿತರಲ್ಲಿರುವ ಪ್ರತಿಭೆಯನ್ನು ಯಾರು ಅಪಹರಿಸಲು ಸಾಧ್ಯವಿಲ್ಲ. ಪ್ರತಿಭಾನ್ವಿತರ ಗುರುತಿಸಿ ಸನ್ಮಾನಿಸುವ ಇಂತಹ ಸಮಾಜಮುಖಿ ಕಾರ್ಯ ನಡೆಸುತ್ತಿರುವುದು ಮೆಚ್ಚುಗೆ ಸಂಗತಿ. ಪ್ರತಿಭಾನ್ವಿತರು ಜೀವನದಲ್ಲಿ ಒಳ್ಳೆಯದನ್ನು ಆಯ್ಕೆ ಮಾಡಿಕೊಂಡು ಕೆಎಎಸ್, ಐಎಎಸ್ ಪರೀಕ್ಷೆಯಲ್ಲಿ ಹೆಚ್ಚು ಸಾಧನೆ ಮಾಡುವ ಮೂಲಕ ಸಮಾಜಕ್ಕೆ ದೊಡ್ಡ ಆಸ್ತಿಯಾಗಬೇಕು ಎಂದು ಸಲಹೆ ನೀಡಿದರು.

ಬನಶಂಕರಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಟಿ. ಮಂಜುನಾಥ್, ವಿಧಾನಸೌಧ ಉಪಕಾರ್ಯದರ್ಶಿ ಬಿ.ಆರ್.ಮಂಜುನಾಥ್, ಬಿಜೆಪಿ ರೈತ ಮೋರ್ಚಾ ರಾಜ್ಯ ಕಾರ್ಯದರ್ಶಿ ಆರ್. ರಾಜೇಶ್, ಸನ್ ಪ್ರಾಜೆಕ್ಟ್ ಉದ್ಯಮಿ ಎಚ್.ಸಿ.ಪ್ರಭಾಕರ್, ಸಹಕಾರ ರತ್ನ ಪ್ರಶಸ್ತಿ ಪುರಸ್ಕೃತ ಡಿ.ಆರ್.ನಾಗೇಶಪ್ಪ, ರಾಜ್ಯ ದೇವಾಂಗ ಸಂಘದ ನಿರ್ದೇಶಕ ಎಂ.ಆರ್.ಶಾಂತಪ್ಪ, ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ದೇವಾಂಗ ನೌಕರರ ಸಂಘದ ಅಧ್ಯಕ್ಷ ಎಸ್.ಚಂದ್ರಶೇಖರ್ ಅವರು ಮಾತನಾಡಿದರು.

ಪುಟ 2

## ಫಾಸ್ಟ್ ನ್ಯೂಸ್

### ವಕೀಲರ ಸಂಘದಿಂದ ಸಂಸದ ಕಾರಜೋಳ ಅವರಿಗೆ ಸನ್ಮಾನ

» ಚಿತ್ರದುರ್ಗ

ಭದ್ರಾ ಮೇಲ್ದಂಡೆ ಯೋಜನೆ ಜಾರಿಯಾದರೆ ಜಿಲ್ಲೆಯ ರೈತರ, ಜನಸಾಮಾನ್ಯರ, ದುಡಿಯುವ ವರ್ಗದವರಿಗೆ,ವ್ಯಾಪಾರಸ್ಥರಿಗೆಅನುಕೂಲವಾಗುತ್ತದೆ ಎಂದು ಸಂಸದ ಗೋವಿಂದ ಕಾರಜೋಳ ಹೇಳಿದರು.ವಕೀಲರ ಭವನದಲ್ಲಿ ಶನಿವಾರ ವಕೀಲರ ಸಂಘದಿಂದ ಸನ್ಮಾನ ಸ್ವೀಕರಿಸಿ ಮಾತನಾಡಿದರು. ಚುನಾವಣೆಯಲ್ಲಿ ನಿಮ್ಮ ಮತ ಯಾಚಿಸಲು ಬಂದಾಗ ನನ್ನ ಮೇಲೆ ವಿಶ್ವಾಸ ನಂಬಿಕೆಯಿಟ್ಟು ನರೇಂದ್ರಮೋದಿ ಮೂರನೆ ಬಾರಿಗೆ ದೇಶದ ಪ್ರಧಾನಿಯಾಗಲೆಂದು ನನ್ನನ್ನು ಗೆಲ್ಲಿಸಿದ್ದೀರಿ. ಅದೆ ರೀತಿ ಸಿರಾ, ಪಾವಗಡದಲ್ಲೂ ಹೆಚ್ಚಿನ ಮತಗಳನ್ನು ನೀಡಿದ್ದಾರೆ. ನನ್ನ ಇತಿಮಿತಿಯೊಳಗೆ ಕೇಂದ್ರ ಸರ್ಕಾರದ ಯೋಜನೆಗಳನ್ನು ತಲುಪಿಸುತ್ತೇನೆ. ಹಾಗೆಯೆ ರಾಜ್ಯ ಸರ್ಕಾರದಿಂದ ಆಗುವ ಕೆಲಸಗಳನ್ನು ಮಾಡಿಸುವಲ್ಲಿ ಪ್ರಯತ್ನಿಸುತ್ತೇನೆಂದು ವಕೀಲರುಗಳಿಗೆ ಭರವಸೆ ನೀಡಿದರು.

ಮಧ್ಯ ಕರ್ನಾಟಕದ ಬಯಲು ಸೀಮೆ ಚಿತ್ರದುರ್ಗ ಜಿಲ್ಲೆಯಲ್ಲಿ ರೈತರು ಮಳೆಯನ್ನೆ ಆಶ್ರಯಿಸುತ್ತಿದ್ದಾರೆ. ಹಾಗಾಗಿ ಭದ್ರಾ ಮೇಲ್ದಂಡೆ ಯೋಜನೆ ನಿಗಧಿತ ಅವಧಿಯಲ್ಲಿ ಪೂರ್ಣಗೊಂಡು ನೀರು ಹರಿದಾಗ ರೈತರ ಮೊಗದಲ್ಲಿ ಮಂದಹಾಸ ಮೂಡಿ ಜಿಲ್ಲೆಯ ಸಮಸ್ಯೆ ಬಗೆಹರಿಯುತ್ತದೆ ಎಂದು ತಿಳಿಸಿದರು.

ವಕೀಲರ ಸಂಘಕ್ಕೆ ಕಂಪ್ಯೂಟರ್ ಹಾಗೂ ಬೆರಳಚ್ಚು ಕೊಠಡಿ, ಸ್ಟೇಷನರಿ ಅಂಗಡಿ ನಿರ್ಮಾಣಕ್ಕೆ ಅನುದಾನ ಮಂಜೂರು ಮಾಡಿ ಹೊಸ ಕಟ್ಟಡ ನಿರ್ಮಿಸಿಕೊಡುವಂತೆ ವಕೀಲರ ಸಂಘದವರು ಸಲ್ಲಿಸಿದ ಮನವಿಗೆ ಯಾವುದೇ ಭರವಸೆ, ಆಶ್ವಾಸನೆಯನ್ನು ನೀಡದೆ ವೇದಿಕೆಯಲ್ಲೇ ಸ್ಯಾಂಕ್ಷನ್ ಮಾಡಿದ ಸಂಸದ ಗೋವಿಂದ ಕಾರಜೋಳರವರು ಎಸ್ಟಿಮೇಷನ್ ತಯಾರಿಸಿ ತರುವಂತೆ ಲೋಕೋಪಯೋಗಿ ಇಲಾಖೆ ಇಂಜಿನಿಯರ್‌ರನ್ನು ಮೊಬೈಲ್‌ನಲ್ಲಿ ಸಂಪರ್ಕಿಸಿ ಸೂಚಿಸಿದರು.

ವಕೀಲರ ಸಂಘದ ಅಧ್ಯಕ್ಷ ವೈ.ತಿಪ್ಪೇಸ್ವಾಮಿ ಸನ್ಮಾನ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡುತ್ತ ವಕೀಲರ ಸಂಘಕ್ಕೆ ಹಣ ಕೊಡುವಂತೆ ಇದುವರೆವಿಗೂ ಯಾವುದೇ ರಾಜಕಾರಣಿಗಳ ಬಳಿ ಕೇಳಿಲ್ಲ. ವಕೀಲರುಗಳಿಗೆ ಮತ್ತು ಕಕ್ಷಿದಾರರಿಗೆ ಅನೇಕ ಸಮಸ್ಯೆಗಳಿವೆ ಅವುಗಳನ್ನು ಬಗೆಹರಿಸುವಂತೆ ಸಂಸದ ಗೋವಿಂದ ಕಾರಜೋಳರವರಲ್ಲಿ ಮನವಿ ಮಾಡಿದರು. ಈಗಿರುವ ನ್ಯಾಯಾಲಯದ ಕಟ್ಟಡ 1969 ರಲ್ಲಿ ನಿರ್ಮಾಣವಾಗಿದ್ದು, ಹೊಸ ಕಟ್ಟಡಕ್ಕೆ 93 ಕೋಟಿ ರೂ.ಗಳು ಮಂಜೂರಾಗಿದ್ದು, ರಾಜ್ಯ ಸರ್ಕಾರದಿಂದ ವಿಳಂಭವಾಗುತ್ತಿದೆ. ಭದ್ರಾ ಮೇಲ್ದಂಡೆ ಯೋಜನೆಗೆ ಕೇಂದ್ರ ಸರ್ಕಾರ ಮಂಜೂರು ಮಾಡಿರುವ ಐದು ಸಾವಿರದ ಮುನ್ನೂರು ಕೋಟಿ ರೂ.ಗಳನ್ನು ತಕ್ಷಣವೆ ಬಿಡುಗಡೆಗೊಳಿಸಿ ಭದ್ರಾ ಮೇಲ್ದಂಡೆ ಯೋಜನೆಯನ್ನು ರಾಷ್ಟ್ರೀಯ ಯೋಜನೆಯನ್ನಾಗಿ ಘೋಷಿಸಬೇಕು. ಅದಕ್ಕೆ ನಿಮ್ಮ ಪ್ರಯತ್ನ ಮುಖ್ಯ ಎಂದು ವೈ.ತಿಪ್ಪೇಸ್ವಾಮಿ ಸಂಸದರಲ್ಲಿ ಕೋರಿದರು.

ವಕೀಲರ ಸಂಘದ ಉಪಾಧ್ಯಕ್ಷ ಬಿ.ಎಂ. ಅನಿಲ್‌ಕುಮಾರ್, ಪ್ರಧಾನ ಕಾರ್ಯದರ್ಶಿ ವಿ.ಗಂಗಾಧರ್, ಸಹ ಕಾರ್ಯದರ್ಶಿ ಗಿರೀಶ್ ವಿ.ಮಲ್ಲಾಪುರ ವೇದಿಕೆಯಲ್ಲಿದ್ದರು. ನೂರಾರು ವಕೀಲರು ಹಾಗೂ ಬಿಜೆಪಿ.ಜಿಲ್ಲಾಧ್ಯಕ್ಷ ಎ.ಮುರಳಿ ಈ ಸಂದರ್ಭದಲ್ಲಿ ಹಾಜರಿದ್ದರು.

### ವಿಶ್ವವೇ ಭಾರತದ ಕಡೆ ನೋಡುವ ಹಾಗಿದೆ

» ಚಿತ್ರದುರ್ಗ

ಇಂದು ಇಡೀ ಭಾರತ ಚಿತ್ರದುರ್ಗದ ಕಡೆ ನೋಡ್ತಾ ಇದ್ರೆ, ವಿಶ್ವ ನಮ್ಮ ಭಾರತದ ಕಡೆ ನೋಡುವ ಹಾಗೆ ನಮ್ಮ ವಿಜ್ಞಾನಿಗಳು ಮಾಡಿ ತೋರಿಸಿದ್ದಾರೆ" ಎಂದು ಇಸ್ರೋ ಹಿರಿಯ ವಿಜ್ಞಾನಿ ಶ್ರೀನಾಥ್ ರತ್ನಾಕರ ಅಭಿಪ್ರಾಯಪಟ್ಟರು. ಅವರು ಚಿತ್ರದುರ್ಗದ ದೇವರಾಜ್ ಅರಸ್ ಎಜುಕೇಶನ್ ಸೊಸೈಟಿಯ ಸಭಾಂಗಣದಲ್ಲಿ ಚಿತ್ರದುರ್ಗ ಸೈನ್ಸ್ ಫೌಂಡೇಶನ್, ಶಾಲಾ ಶಿಕ್ಷಣ ಇಲಾಖೆ ಹಾಗೂ ದೇವರಾಜ್ ಅರಸ್ ಎಜುಕೇಶನ್ ಸೊಸೈಟಿ ಇವರ ಸಹಯೋಗದಲ್ಲಿ ಏರ್ಪಡಿಸಲಾಗಿದ್ದ ಭಾರತೀಯ ಬಾಹ್ಯಾಕಾಶ ದಿನದ ಅಂಗವಾಗಿ ಜಿಲ್ಲೆಯ ಪ್ರೌಢಶಾಲಾ ವಿಜ್ಞಾನ ಶಿಕ್ಷಕರಿಗಾಗಿ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸ ನೀಡಿದರು. ಅವರು ಮುಂದುವರೆದು ಮಾತನಾಡಿ " ಚಂದ್ರಯಾನ – 3 ರ ಸ್ಮರಣೆ ಮತ್ತು ಇಸ್ರೋದ ಸಾಧನೆಗಳ ಬಗ್ಗೆ ಜಾಗೃತಿ ಮೂಡಿಸುವ ಸಲುವಾಗಿ ಈ ದಿನವನ್ನು ಆಚರಿಸಲಾಗುತ್ತಿದೆ. ಇಸ್ರೋ ಚಂದ್ರನಲ್ಲಿಗೆ ಮಾನವಸಹಿತ ನೌಕೆಯನ್ನು ಕಳುಹಿಸಲು ಆರಂಭಿಸಿದೆ. ಶುಕ್ರಯಾನ, ಮಂಗಳಯಾನ, ಹಾಗೂ ಆದಿತ್ಯಯಾನದ ಬಗ್ಗೆಯೂ ಇಸ್ರೋ ನೌಕೆಗಳನ್ನು ಕಳುಹಿಸಲು ಯೋಜನೆಗಳನ್ನು ರೂಪಿಸಲು ಸಿದ್ಧವಾಗುತ್ತಿದೆ. ಭವಿಷ್ಯದಲ್ಲಿ ಭಾರತ ಇಡೀ ವಿಶ್ವವೇ ಬೆರಗಾಗುವಂತೆ ನೋಡುವ ಕಾರ್ಯಗಳನ್ನು ಮಾಡುತ್ತಿದೆ. ಎಂದು ಇಸ್ರೋ ವಿಜ್ಞಾನಿ ತಿಳಿಸಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದ ದೇವರಾಜ್ ಅರಸ್ ಎಜುಕೇಶನ್ ಸೊಸೈಟಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶ್ರೀ ಎಂ.ಸಿ.ರಘುಚಂದನ್ ಅವರು ಇಂತಹ ಕಾರ್ಯಕ್ರಮಗಳಲ್ಲಿ ಭಾಗವಹಿಸುವ ಮೂಲಕ ವಿಜ್ಞಾನ ಶಿಕ್ಷಕರು ವಿಜ್ಞಾನಿಗಳ ಅತ್ಯುತ್ತಮ ವಿಚಾರವನ್ನು ತಿಳಿಯುವ ಮೂಲಕ ವಿದ್ಯಾರ್ಥಿಗಳಿಗೂ ಬಾಹ್ಯಾಕಾಶದ ಬಗ್ಗೆ ಜಾಗೃತಿ ಮೂಡಿಸುವ ಕೆಲಸ ಮಾಡಿ. ಎಂದು ತಿಳಿಹೇಳಿದರು. ಸೈನ್ಸ್ ಫೌಂಡೇಶನ್ ಚಿತ್ರದುರ್ಗ ಉಪಾಧ್ಯಕ್ಷ ಚಳ್ಳಕೆರೆ ಯರಿಸ್ವಾಮಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಚಿತ್ರದುರ್ಗ ಸೈನ್ಸ್ ಫೌಂಡೇಶನ್ ಅಧ್ಯಕ್ಷ ಡಾ.ಜಿ. ಎನ್. ಮಲ್ಲಿಕಾರ್ಜುನಪ್ಪ, ಕಾರ್ಯದರ್ಶಿ ಎಚ್. ಎಸ್.ಟಿ.ಸ್ವಾಮಿ ಉಪಸ್ಥಿತರಿದ್ದರು.

## ಉಚ್ಚ ನ್ಯಾಯಾಲಯದ ನ್ಯಾಯಮೂರ್ತಿ ಆರ್.ನಟರಾಜ್ ಕರೆ

# ಬಾಲ್ಯ ವಿವಾಹ ತೊಲಗಿಸಲು ಕೈ ಜೋಡಿಸಿ

» ಚಿತ್ರದುರ್ಗ

ಬಾಲ್ಯ ವಿವಾಹ ಎಂಬ ಸಾಮಾಜಿಕ ಪಿಡುಗು ತೊಲಗಿಸಲು ಎಲ್ಲಾ ಸರ್ಕಾರಿ ಅಧಿಕಾರಿಗಳು ಕೈ ಜೋಡಿಸಿ, ಸಮನ್ವಯದಿಂದ ಕಾರ್ಯನಿರ್ವಹಿಸುವಂತೆ ಉಚ್ಚ ನ್ಯಾಯಾಲಯದ ನ್ಯಾಯಮೂರ್ತಿಗಳು ಹಾಗೂ ಚಿತ್ರದುರ್ಗ ಜಿಲ್ಲಾ ಆಡಳಿತಾತ್ಮಕ ನ್ಯಾಯಮೂರ್ತಿ ಆರ್.ನಟರಾಜ್ ಕರೆ ನೀಡಿದರು.

ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಭಾನುವಾರ ಬಾಲ್ಯ ವಿವಾಹ ಮತ್ತು ಬಾಲ್ಯ ಗರ್ಭಾವಸ್ಥೆ ತಡೆಗಟ್ಟುವ ಕುರಿತು ವಿಶೇಷ ಉಪನ್ಯಾಸ ನೀಡಿ ಅವರು ಮಾತನಾಡಿದರು.

ಬಾಲ್ಯ ವಿವಾಹ ಎಂಬ ಪಿಡುಗು ಬಹುಕಾಲದಿಂದಲೂ ಭಾರತ ಸೇರಿದಂತೆ ಪ್ರಪಂಚದ ವಿವಿಧ ರಾಷ್ಟ್ರಗಳಲ್ಲಿ ಅಸ್ತಿತ್ವದಲ್ಲಿದೆ. ನಾನಾ ಕಾರಣಗಳಿಂದ ಬಾಲ್ಯ ವಿವಾಹ ಪದ್ಧತಿ ಬೆಳೆದು ಬಂದಿದೆ. ಬಡತನ ಹಾಗೂ ಅನಕ್ಷರತೆ ಬಾಲ್ಯವಿವಾಹಕ್ಕೆ ಕಾರಣವಾಗಿವೆ. ದೇಶದಲ್ಲಿ ಮದುವೆಗೆ ಹೆಣ್ಣುಮಕ್ಕಳ ಸಮ್ಮತಿ ಪಡೆಯುವ ವಯಸ್ಸನ್ನು ಕಾಲ ಕಾಲಕ್ಕೆ ಹೆಚ್ಚಿಸುತ್ತಾ ಬರಲಾಗಿದೆ. ಸ್ವಾತಂತ್ರ ಪೂರ್ವದಲ್ಲಿ ಸಮಾಜ ಸುಧಾರಕರ ಪ್ರಯತ್ನದಿಂದಾಗಿ 1929ರಲ್ಲಿ ಬಾಲ್ಯ ವಿವಾಹ ನಿರ್ಬಂಧ ಕಾಯ್ದೆ ಜಾರಿಗೊಳಿಸಲಾಯಿತು. 2006ರಲ್ಲಿ ಬಾಲ್ಯ ವಿವಾಹ ನಿಷೇಧ ಕಾಯ್ದೆ ಜಾರಿ ಮಾಡುವ ಮೂಲಕ ಬಾಲ್ಯ ವಿವಾಹ ತಡೆ ಹೆಚ್ಚಿನ ಕಾನೂನಿನ ಬಲ ನೀಡಲಾಗಿದೆ. ಸರ್ವೋಚ್ಛ ನ್ಯಾಯಾಲಯಕ್ಕೆ ಕೇಂದ್ರ ಸರ್ಕಾರ ನೀಡಿದ ಮಾಹಿತಿಯಂತೆ ದೇಶದಲ್ಲಿ 2.30 ಕೋಟಿ ಬಾಲವಧುಗಳು ಇದ್ದಾರೆ. ಕರ್ನಾಟಕ ರಾಜ್ಯದಲ್ಲಿ 1.33 ಲಕ್ಷ ಬಾಲವಧುಗಳು ಇರುವುದು ತಿಳಿದು ಬಂದಿದೆ. ಈ ಸಂಖ್ಯೆಗಳು ಬಾಲ್ಯ ವಿವಾಹ ಎಂಬ ಪಿಡುಗಿನ ವ್ಯಾಪಕತೆಯನ್ನು ಸ್ಪಷ್ಟಪಡಿಸುತ್ತವೆ.




ಜಿಲ್ಲೆಯಲ್ಲಿ ಜಿಲ್ಲಾಧಿಕಾರಿಗಳು ಬಾಲ್ಯ ವಿವಾಹ ತಡೆಗಟ್ಟುವ ಜವಾಬ್ದಾರಿಯನ್ನು ಹೊತ್ತಿರುತ್ತಾರೆ. ಕಂದಾಯ ಹಾಗೂ ಗ್ರಾಮೀಣಾಭಿವೃದ್ಧಿ ಸೇರಿದಂತೆ ಹಳ್ಳಿಗಳಲ್ಲಿ ಕೆಲಸ ಮಾಡುವ ಎಲ್ಲಾ ಇಲಾಖೆ ನೌಕರರು ಬಾಲ್ಯ ವಿವಾಹದ ಬಗ್ಗೆ ಮಾಹಿತಿ ತಿಳಿದ ತಕ್ಷಣವೇ ಅದರ ತಡೆಗೆ ಪ್ರಯತ್ನಿಸಬೇಕು. ಬಾಲ್ಯವಿವಾಹದ ಕುರಿತು ಸಹಾಯವಾಣಿಗೆ ಬಂದ ದೂರುಗಳಿಗೆ ಜಿಲ್ಲಾಡಳಿತ ತಕ್ಷಣ ಸ್ಪಂದಿಸಿ ಬಾಲ್ಯ ವಿವಾಹ ತಡೆಗಟ್ಟಿದೆ. ಆದರೂ ಜಿಲ್ಲೆಯಲ್ಲಿ ಬಾಲ್ಯವಿವಾಹ ಪ್ರಕರಣಗಳ ಸಂಖ್ಯೆ ಹೆಚ್ಚುತ್ತಿರುವುದು ಕಂಡುಬಂದಿದೆ ನ್ಯಾಯಮೂರ್ತಿ ಆರ್. ನಟರಾಜ್ ಹೇಳಿದರು.

ಬಾಲ್ಯ ವಿವಾಹ ಮಾದರಿಯಲ್ಲಿ ಬಾಲ ಗರ್ಭಾವಸ್ಥೆಯೂ ಕೂಡ ಪಿಡುಗಾಗಿ ಪರಿಣಮಿಸಿದೆ. ಹದಿಹರೆಯದ ಯುವಕ ಯುವತಿಯರು ದೈಹಿಕ ತುಡಿತ, ಕುತೂಹಲ ಹಾಗೂ ಆಸೆಗೆ ಒಳಗಾಗಿ ಇಂತಹ ದುಸ್ಥಿತಿ ತಲುಪುತ್ತಾರೆ. ದೈಹಿಕ ಹಾಗೂ ಮಾನಸಿಕವಾಗಿ ಸಧೃಡವಾಗಿರದ ಬಾಲಕಿಯರು ಗರ್ಭಧಾರಣೆ ಒಳಗಾಗಿ ನಾನಾ ಸಂಕಷ್ಟಗಳಿಗೆ ತುತ್ತಾಗುತ್ತಾರೆ. 18 ವರ್ಷ ಒಳಗಿನ ಮಕ್ಕಳ ಮೇಲಿನ ದೌರ್ಜನ್ಯ ತಡೆಯಲು ಪೋಕ್ಸೋ ಕಾಯ್ದೆ ಜಾರಿ ಮಾಡಲಾಗಿದೆ. ಮಕ್ಕಳ ದೌರ್ಜನ್ಯದ ಸಂಗತಿಗಳು ಕಂಡುಬಂದ ತಕ್ಷಣವೇ ದೂರು ದಾಖಲಿಸಬೇಕು. ಬಾಲ್ಯ ವಿವಾಹ ಹಾಗೂ ಬಾಲಗರ್ಭಾವಸ್ಥೆ ತಡೆಗಟ್ಟಲು ಪ್ರಾಮಾಣಿಕ ಪ್ರಯತ್ನ ಮಾಡುವಂತೆ ನ್ಯಾಯಮೂರ್ತಿ ಆರ್. ನಟರಾಜ್ ತಿಳಿಸಿದರು.

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾಗಳ ಪ್ರಾಧಿಕಾರದ ಅಧ್ಯಕ್ಷರಾದ ರೋಣ ವಾಸುದೇವ ಮಾತನಾಡಿ, ಬಾಲ್ಯ ವಿವಾಹ ಹಾಗೂ ಬಾಲ್ಯ ಗರ್ಭಾವಸ್ಥೆ ಪ್ರಕರಣಗಳಲ್ಲಿ ಚಿತ್ರದುರ್ಗ ಜಿಲ್ಲೆಯು ರಾಜ್ಯದಲ್ಲಿ 5ನೇ ಸ್ಥಾನದಲ್ಲಿದೆ. ಬಾಲ್ಯವಿವಾಹ ತಡೆಯುವುದು ಕೇವಲ ಒಂದು ಇಲಾಖೆ ಜವಾಬ್ದಾರಿ ಮಾತ್ರ ಅಲ್ಲ. ಎಲ್ಲ ಇಲಾಖೆಗಳು ಸೇರಿ ಕಾಯ್ದೆಯನ್ನು ಸಮರ್ಪಕವಾಗಿ ಅನುಷ್ಠಾನ ಮಾಡಿ ಬಾಲ್ಯ ವಿವಾಹ ಆಗುವುದನ್ನು ತಡೆಗಟ್ಟೋಣ ಎಂದು ತಿಳಿಸಿದ ಅವರು, ರಾಜ್ಯದಲ್ಲಿ 5ನೇ ಸ್ಥಾನ ಪಡೆದಿರುವ ಚಿತ್ರದುರ್ಗ ಜಿಲ್ಲೆಯನ್ನು ಹೊರಗಡೆ ತರಲು ದೃಢನಿಶ್ಚಯ ಮಾಡೋಣ ಎಂದು ತಿಳಿಸಿದರು.

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್. ಜೆ.ಸೋಮಶೇಖರ್ ಮಾತನಾಡಿ, ಜಿಲ್ಲೆಯಲ್ಲಿ ಎಲ್ಲರೂ ಸೇರಿ ವಿವಿಧ ಇಲಾಖೆಗಳ ಸಮನ್ವಯದಿಂದ ಕಾರ್ಯನಿರ್ವಹಿಸುವ ಮೂಲಕ ಬಾಲ್ಯವಿವಾಹ ಪ್ರಕರಣಗಳನ್ನು ತಡೆಯುವ ನಿಟ್ಟಿನಲ್ಲಿ ಕ್ರಮವಹಿಸಲಾಗುವುದು ಎಂದು ಹೇಳಿದರು.

ಕ್ಷೇತ್ರಮಟ್ಟದಲ್ಲಿ ಕಾರ್ಯನಿರ್ವಹಿಸುವ ಅಧಿಕಾರಿಗಳು ವಿಶೇಷವಾಗಿ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಕೆಲಸ ಮಾಡುವ ಅಧಿಕಾರಿಗಳು, ಗ್ರಾಮ ಪಂಚಾಯಿತಿ ಸದಸ್ಯರು, ಜನಪ್ರತಿನಿಧಿಗಳಿಗೆ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸಹಕಾರದೊಂದಿಗೆ ಮುಂದಿನ ದಿನಗಳಲ್ಲಿ ಬಾಲ್ಯವಿವಾಹ ಕುರಿತು ಜಾಗೃತಿ ಆಂದೋಲನದ ಮೂಲಕ ಮನವರಿಕೆ ಮಾಡುವ ಕೆಲಸ ಮಾಡಲಾಗುವುದು ಎಂದು ಹೇಳಿದರು.

ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಮಾತನಾಡಿ, ಸಾಮಾಜಿಕ ಪಿಡುಗಾಗಿರುವ ಬಾಲ್ಯವಿವಾಹ ತಡೆಯುವ ನಿಟ್ಟಿನಲ್ಲಿ ಆಯಾ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ ನಿತ್ಯವೂ ಮಕ್ಕಳ ಹಾಜರಾತಿ ಟ್ರ್ಯಾಕಿಂಗ್ ಮಾಡಲಾಗುತ್ತಿದ್ದು, ದೀರ್ಘಕಾಲದ ಗೈರು ಹಾಜರಿ ಆಗುವ ಹೆಣ್ಣು ಮಕ್ಕಳ ಮನೆಗಳಿಗೆ ಶಿಕ್ಷಕರು ಭೇಟಿ ನೀಡಿ ಪರಿಶೀಲನೆ ನಡೆಸಿ ಮಕ್ಕಳ ಮೇಲೆ ನಿಗಾವಹಿಸಲಾಗುತ್ತಿದೆ.

ಬಾಲ್ಯವಿವಾಹ ಜಿಲ್ಲೆಗೆ ಅಂಟಿರುವ ಕಳಂಕ, ಶಾಪವಾಗಿದ್ದು, ಇದರ ವಿಮೋಚನೆ ಆಗಲೇಬೇಕು ಎಂದು ಹೇಳಿದರು.

ಜಿಲ್ಲೆಯಲ್ಲಿ ಹೆಚ್ಚಾಗಿರುವ ಬಾಲ್ಯವಿವಾಹ ಹಾಗೂ ಬಾಲ್ಯಗರ್ಭಾವಸ್ಥೆ ಪ್ರಕರಣಗಳನ್ನು ಹಂತ ಹಂತವಾಗಿ ಇಳಿಮುಖವಾಗಿಸುವ ನಿಟ್ಟಿನಲ್ಲಿ ಬಾಲ್ಯವಿವಾಹವನ್ನು ತೊಲಗಿಸಲು ಕಟ್ಟುನಿಟ್ಟಿನ ಕ್ರಮವಹಿಸಲಾಗುವುದು. ಈ ನಿಟ್ಟಿನಲ್ಲಿ ಪ್ರತಿಯೊಬ್ಬ ಅಧಿಕಾರಿಗಳು, ನೌಕರರು ತಮ್ಮ ಕಾರ್ಯತತ್ಪರತೆಯನ್ನು ಕ್ಷೇತ್ರಮಟ್ಟದಲ್ಲಿ ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸುವ ಮೂಲಕ ಬಾಲ್ಯವಿವಾಹ ನಿಯಂತ್ರಣ ಮಾಡಲಾಗುವುದು ಎಂದು ಭರವಸೆ ನೀಡಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್‌ಕುಮಾರ್ ಬಂಡಾರು ಮಾತನಾಡಿ, ಬಾಲ್ಯವಿವಾಹ ಹಾಗೂ ಬಾಲ್ಯ ಗರ್ಭಾವಸ್ಥೆ ಪ್ರಕರಣಗಳನ್ನು ಸವಾಲಾಗಿ ತೆಗೆದುಕೊಂಡು ಕಾರ್ಯನಿರ್ವಹಿಸಲಾಗುವುದು. ಈ ಪಿಡುಗುಗಳು ಮಕ್ಕಳ ಮೇಲೆ ಬಹಳಷ್ಟು ದುಷ್ಪರಿಣಾಮ ಬೀರಲಿದೆ. ಇದರಿಂದ ಮೂಲಭೂತ ಹಕ್ಕುಗಳ ಉಲ್ಲಂಘನೆಯೂ ಹೌದು. ನ್ಯಾಯಾಂಗ, ಕಾರ್ಯಾಂಗ, ಶಾಸಕಾಂಗದ ಮುಖ್ಯ ಮುಖ್ಯ ಜವಾಬ್ದಾರಿ ನಾಗರಿಕರ ಮೂಲಭೂತ ಹಕ್ಕುಗಳ ರಕ್ಷಣೆ ಮಾಡುವುದೇ ಆಗಿದೆ. ಹಾಗಾಗಿ ನಾವೆಲ್ಲರೂ ಸಮನ್ವಯತೆ, ಬದ್ಧತೆ ಹಾಗೂ ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ.ವಿಜಯ್, ವಕೀಲರ ಸಂಘದ ಅಧ್ಯಕ್ಷ ವೈ.ತಿಪ್ಪೇಸ್ವಾಮಿ ಸೇರಿದಂತೆ ಶಾಲಾ ಮುಖ್ಯ ಶಿಕ್ಷಕರು, ಪದವಿಪೂರ್ವ ಕಾಲೇಜುಗಳ ಪ್ರಾಂಶುಪಾಲರು ಹಾಗೂ ವಿವಿಧ ಇಲಾಖೆ ಅಧಿಕಾರಿಗಳು ಇದ್ದರು.

# ಸಮಾಜದಲ್ಲಿ ಶಿಕ್ಷಕ ವೃತ್ತಿ ಬಹಳ ಪವಿತ್ರವಾದದ್ದು

» ಹೊಸದುರ್ಗ

ನಮ್ಮ 31 ವರ್ಷಗಳ ಸುದೀರ್ಘ ಶಿಕ್ಷಕ ವೃತ್ತಿಯ ಅವಧಿಯಲ್ಲಿ ಸಾವಿರಾರು ವಿದ್ಯಾರ್ಥಿಗಳು ಅಧ್ಯಯನ ಮಾಡಿ, ಸಮಾಜದಲ್ಲಿ ಉತ್ತಮ ಸ್ಥಾನಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ. ಅವರು ಎಷ್ಟೇ ಎತ್ತರಕ್ಕೆ ಬೆಳೆದರೂ ಪ್ರಾಥಮಿಕ ಶಾಲೆಯಲ್ಲಿ ನಾವು ಕಲಿಸಿದ ಮೌಲ್ಯಯುತ ಶಿಕ್ಷಣವನ್ನು ಎಂದಿಗೂ ಮರೆಯುವುದಿಲ್ಲ. ಮಗುವಿಗೆ ಅಕ್ಷರಭ್ಯಾಸದ ಮೂಲಕ ಸಂಸ್ಕಾರಯುತ ಶಿಕ್ಷಣ ನೀಡುವ ವ್ಯಕ್ತಿಯೇ ಶಿಕ್ಷಕ. ಈ ವೃತ್ತಿ ಸಮಾಜದಲ್ಲಿ ಬಹಳ ಪವಿತ್ರವಾದದ್ದಾಗಿದೆ ಎಂದು ನಿವೃತ್ತಿ ಹೊಂದಿದ ಶಿಕ್ಷಕ ಕೆ.ಮಂಜುನಾಥ್ ಹೇಳಿದರು. ತಾಲೂಕಿನ ಅತ್ತಿಮಗೆ ಭೋವಿಹಟ್ಟಿ ಗ್ರಾಮದ ಸರ್ಕಾರಿ ಪ್ರಾಥಮಿಕ ಶಾಲಾ ಆವರಣದಲ್ಲಿ ಶಾಲೆ ಮತ್ತು ಗ್ರಾಮಸ್ಥರ ವತಿಯಿಂದ ತಮಗೆ ಶುಕ್ರವಾರ ಆಯೋಜಿಸಿದ್ದ



ಬೀಳ್ಕೊಡುಗೆ ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು, ನನ್ನ 31 ವರ್ಷಗಳ ಸುದೀರ್ಘ ಸೇವಾ ಅವಧಿಯಲ್ಲಿ ಹಲವಾರು ಗ್ರಾಮಗಳ ಶಾಲೆಗಳಲ್ಲಿ ಕೆಲಸ ಮಾಡಿದ್ದೇನೆ. ಎಲ್ಲಾ ಕಡೆಗಳಲ್ಲಿಯೂ ಉತ್ತಮ ಸ್ಪಂದನೆ ದೊರೆತಿದೆ. ಇಷ್ಟು ದಿನಗಳ ಕಾಲ ಮಕ್ಕಳು ಹಾಗೂ ಸಹೋದ್ಯೋಗಿಗಳೊಂದಿಗೆ ಸದಾ ಬೆರೆತು ನನ್ನನ್ನೇ ನಾನು ತೊಡಗಿಸಿಕೊಳ್ಳುತ್ತಿದ್ದೆ. ಇದೀಗ, ನಿವೃತ್ತ ಗೊಳ್ಳುತ್ತಿರುವುದು ಬೇಸರ ತರಿಸಿದೆ. ಆದರೂ, ನನಗೆ ಇಲ್ಲಿಯವರೆಗೂ ಸಹಕರಿಸಿ, ಗೌರವಿಸಿದ ನನ್ನೆಲ್ಲಾ ವಿದ್ಯಾರ್ಥಿಗಳನ್ನು, ಸಹೋದ್ಯೋಗಿ ಶಿಕ್ಷಕರನ್ನು,ಶಾಲೆಗಳ ಸಿಬ್ಬಂದಿಗಳನ್ನು ಜೀವನದಲ್ಲಿಯೇ ಮರೆಯಲು ಸಾಧ್ಯವಿಲ್ಲವೆಂದು ಬಾವುಕರಾಗಿ ಮಾತನಾಡಿದರು.

ಈ ವೇಳೆ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಲೆಯ ಎಸ್ ಡಿ ಎಂ ಸಿ ಅಧ್ಯಕ್ಷ ಯಲ್ಲಪ್ಪ ವಹಿಸಿದ್ದರು. ಬಡ್ತಿ ಮುಖ್ಯ ಶಿಕ್ಷಕ ಪರಮೇಶ್ವರಪ್ಪ ಅತಿಥಿಗಳನ್ನ ಸ್ವಾಗತಿಸಿದರು. ಮಹಾಂತೇಶ್ ನಿರೂಪಿಸಿದರು. ಕ್ಷೇತ್ರ ಸಮನ್ವಯಾಧಿಕಾರಿ ಶ್ರೀನಿವಾಸ್, ಈಸಿಓಗಳಾದ ಕೆಂಚಪ್ಪ, ಶಶಿಧರ್, ಸಿಆರ್ ಪಿ ರವಿಶಂಕರ್, ತಾಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಮಂಜುನಾಥ್ ಮತ್ತು ಹೊಸದುರ್ಗ ಪಟ್ಟಣದ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯ ಗುರುಮೂರ್ತಿ ಸೇರಿದಂತೆ ಉಪನ್ಯಾಸಕರು, ಶಾಲಾ ಶಿಕ್ಷಕರು, ಸಿಬ್ಬಂದಿಗಳು, ಗ್ರಾಮಸ್ಥರು ಮತ್ತು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

## ಆಹಾರ ಸುರಕ್ಷತೆ : 95 ಸ್ಥಳ ಪರಿಶೀಲನೆ, 52 ನೋಟಿಸ್ ಜಾರಿ



» ಚಿತ್ರದುರ್ಗ

ಆಹಾರ ಸುರಕ್ಷತೆ ಆಂದೋಲನದ ಅಂಗವಾಗಿ ಜಿಲ್ಲಾ ವ್ಯಾಪ್ತಿಯ 95 ಹೋಟೆಲ್, ಬೇಕರಿ, ರೆಸ್ಟೋರೆಂಟ್, ಬೀದಿ ಬದಿ ವ್ಯಾಪಾರಿಗಳ ತಪಾಸಣೆಯನ್ನು ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆಯ ಅಧಿಕಾರಿಗಳು ಪರಿಶೀಲನೆ ನಡೆಸಿದ್ದಾರೆ. ಆಗಸ್ಟ್ 30 ಹಾಗೂ 31 ಜರುಗಿದ ತಪಾಸಣೆಯಲ್ಲಿ 61 ಆಹಾರ ಮಾದರಿ ಸಂಗ್ರಹಿಸಿ ಪ್ರಯೋಗಾಲಯ ಪರೀಕ್ಷೆಗಾಗಿ ಕಳುಹಿಸಲಾಗಿರುತ್ತದೆ. ಸ್ವಚ್ಛತೆ ಹಾಗೂ ಸುರಕ್ಷತಾ ಕ್ರಮ ಪಾಲಿಸದ 52 ವ್ಯಾಪಾರಿಗಳಿಗೆ ನೋಟೀಸು ಜಾರಿ ಮಾಡಲಾಗಿದೆ. ಮುಂದಿನ ದಿನಗಳಲ್ಲಿ ನ್ಯೂನತೆ ಸರಿಪಡಿಸಿಕೊಳ್ಳದಿದ್ದರೆ, ತಪ್ಪು ಮರುಕಳಿಸಿದರೆ ದಂಡ ಜೊತೆಗೆ ಶಿಕ್ಷೆಯನ್ನು ವಿಧಿಸಲಾಗುವುದು ಅಧಿಕಾರಿಗಳು ಎಚ್ಚರಿಸಿದ್ದಾರೆ. ಅಲ್ಲದೆ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಪಾಡುವ ಕುರಿತು, ವೈಯಕ್ತಿಕ ಸ್ವಚ್ಛತೆ ಕುರಿತು ಆರೋಗ್ಯ ಶಿಕ್ಷಣ ನೀಡಿ ಜಾಗೃತಿ ಮೂಡಿಸಿದ್ದಾರೆ. ತಪಾಸಣೆ ವೇಳೆ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆ ಅಂಕಿತಾಧಿಕಾರಿ ರಾಜಶೇಖರ ಪಾಳೇದವರ, ಆಹಾರ ಸುರಕ್ಷತಾ ಅಧಿಕಾರಿಗಳಾದ ನಂದಿನಿ ಕಡಿ, ತಿರುಮಲೇಶ್ ಎನ್.ಹೆಚ್ ಮಂಜುನಾಥ್ ಇದ್ದರು.

## ಪ್ರತಿಭಾನ್ವಿತ ಮಕ್ಕಳನ್ನು ದೇಶದ ಆಸ್ತಿ ಮಾಡಿ

ಮೊದಲ ಪುಟದಿಂದ: ಸಮಾರಂಭದಲ್ಲಿ ಶಾಸಕರಾದ ಬಿ.ಜಿ.ಗೋವಿಂದಪ್ಪ, ಸಮಾಜ ಸೇವಕ ಟಿ.ಮಂಜುನಾಥ್, ಸಹಕಾರ ರತ್ನ ಪ್ರಶಸ್ತಿ ಪುರಸ್ಕೃತ ಡಿ.ಆರ್.ನಾಗೇಶಪ್ಪ, ಶಿವಮೊಗ್ಗ ಹಾಲು ಉತ್ಪಾದಕರ ಒಕ್ಕೂಟದ ನಿರ್ದೇಶಕ ಬಿ.ಆರ್.ರವಿಕುಮಾರ್, ಹೊಸದುರ್ಗ ಪುರಸಭೆ ಉಪಾಧ್ಯಕ್ಷೆ ಗೀತಾ ಆಸಂದಿ ಗಜೇಂದ್ರ, ಬೆಲಗೂರು ಗ್ರಾಮ ಪಂಚಾಯ್ತಿ ಅಧ್ಯಕ್ಷೆ ಸವಿತಾ ರಂಗಸ್ವಾಮಿ ಹಾಗೂ ಎಸ್ಸೆಸ್ಸೆಲ್ಸಿ, ಪಿಯುಸಿ ಪ್ರತಿಭಾನ್ವಿತ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಗೌರವಿಸಲಾಯಿತು.ಸಮಾರಂಭದಲ್ಲಿ ಪುರಸಭೆ ಸದಸ್ಯರಾದ ದಾಳಿಂಬೆ ಗಿರೀಶ್, ಮೇಘಾ ರಾಮಚಂದ್ರ, ರಾಮಚಂದ್ರಪ್ಪ, ಭದ್ರಾ ಮೇಲ್ದಂಡೆ ಎಂಜಿನಿಯರ್ ಪ್ರಕಾಶ್, ಡಾ.ಜಿ.ನಾಗರಾಜು, ಗೌಡ್ರು ರಂಗನಾಥ್, ಕಮಲ್ ರಾಮಚಂದ್ರ, ಶಾಂತಮೂರ್ತಿ, ದೇವಾಂಗ ನೌಕರರ ಸಂಘದ ಉಪಾಧ್ಯಕ್ಷ ಎಸ್.ಸುರೇಶ್ ನೀರಗುಂದ, ಕಾರ್ಯದರ್ಶಿ ಎಸ್.ಮಂಜುನಾಥ್, ಖಜಾಂಚಿ ಎ.ಟಿ.ವೆಂಕಟೇಶ್, ಅನಂತ್, ರವಿಶಂಕರ್ ಹಾಜರಿದ್ದರು.

## ಪ್ರಮುಖ ಸುದ್ದಿ

### ವಿಚಾರ ಸಂಕಿರಣದಲ್ಲಿ ಮಾನಸಿಕ ಆರೋಗ್ಯ ತಜ್ಞ ಡಾ.ಮಂಜುನಾಥ್ ಅಭಿಮತ

# ಮಾದಕ ವ್ಯಸನದಿಂದ ಬದುಕಿರುವಾಗಲೇ ನರಕಯಾತನೆ

» ಚಿತ್ರದುರ್ಗ

ಮಾದಕ ವ್ಯಸನದ ದಾಸರಾದರೆ ಬದುಕಿರುವಾಗಲೇ ನರಕಯಾತನೆ, ಚಿತ್ರಹಿಂಸೆ ಅನುಭವಿಸಬೇಕಾಗುತ್ತದೆ. ಮಾದಕ ವ್ಯಸನ ಕೇವಲ ವ್ಯಕ್ತಿಯನ್ನಷ್ಟೇ ಅಲ್ಲದೇ ಕುಟುಂಬ ಹಾಗೂ ಸಮಾಜದ ಸ್ವಾಸ್ಥ್ಯವನ್ನೂ ಹಾಳು ಮಾಡುತ್ತದೆ ಎಂದು ಮಾನಸಿಕ ಆರೋಗ್ಯ ತಜ್ಞ ಡಾ.ಮಂಜುನಾಥ್ ಅಭಿಪ್ರಾಯಪಟ್ಟರು.

ನಗರದ ಬಾಲಕರ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ಶನಿವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಕರ್ನಾಟಕ ಮದ್ಯಪಾನ ಸಂಯಮ ಮಂಡಳಿ, ಡೇಟ್ ಚಾರಿಟೇಬಲ್ ಸೊಸೈಟಿ ಸಹಯೋಗದಲ್ಲಿ ವ್ಯಸನಮುಕ್ತ ದಿನಾಚರಣೆ ಅಂಗವಾಗಿ ಮದ್ಯ ಮತ್ತು ಮಾದಕಗಳ ದುಷ್ಪರಿಣಾಮಗಳ ಕುರಿತು ಏರ್ಪಡಿಸಿದ ವಿಚಾರ ಸಂಕಿರಣದಲ್ಲಿ ಅವರು ಮಾತನಾಡಿದರು.

ಮಾದಕ ವಸ್ತುಗಳಲ್ಲಿ ಮೆದುಳಿನಲ್ಲಿ ಕ್ಷಣಿಕ ಸುಖ ನೀಡುವ ಹಾರ್ಮೋನ್‌ನನ್ನು




ಬಿಡುಗಡೆಗೊಳಿಸುವ ಹಾನಿಕಾರಕ ರಾಸಾಯನಿಕಗಳಿದ್ದು, ಇವುಗಳು ಮನುಷ್ಯನನ್ನು ಮಾದಕ ವಸ್ತುಗಳ ವ್ಯಸನಕ್ಕೆ ದಾಸನನ್ನಾಗಿ ಮಾಡಿಸುತ್ತವೆ. ಮಾದಕ ವಸ್ತುಗಳ ವ್ಯಸನೆಯಿಂದ ಹಲವಾರು ದೈಹಿಕ ಮತ್ತು ಮಾನಸಿಕ ಕಾಯಿಲೆಗಳು ಬರುವುದರಿಂದ ಉತ್ತಮ ಆರೋಗ್ಯದ ಹಿತದೃಷ್ಠಿಯಿಂದ ಮಾದಕ ವಸ್ತುಗಳಿಂದ ದೂರವಿರಬೇಕು. ವಿದ್ಯಾರ್ಥಿಗಳು ಮದ್ಯ ಮತ್ತು ಮಾದಕಗಳ ದುಷ್ಪರಿಣಾಮಗಳ ಬಗ್ಗೆ ಅರಿತುಕೊಂಡು, ತಮ್ಮ ಕುಟುಂಬ ಹಾಗೂ ಸಮಾಜಕ್ಕೆ ಸಂದೇಶವನ್ನು ತಲುಪಿಸುವ ಕಾರ್ಯ ಮಾಡಬೇಕು. ವಿದ್ಯಾರ್ಥಿ ದೆಸೆಯಲ್ಲಿ ದುಶ್ಚಟಗಳಿಗೆ ಒಳಗಾಗದೆ, ತಮ್ಮ ವಿಧ್ಯಾಭ್ಯಾಸ ಹಾಗೂ ಉಜ್ವಲ ಭವಿಷ್ಯ ರೂಪಿಸಿಕೊಳ್ಳುವತ್ತ ಗಮನ ಕೇಂದ್ರೀಕರಿಸಬೇಕು ಎಂದು ತಿಳಿಸಿದರು.

ಡೇಟ್ ಚಾರಿಟೇಬಲ್ ಟ್ರಸ್ಟ್‌ನ ಗಾಯಿತ್ರಿ ಅವರು ಮಾತನಾಡಿ, ಕಾಲೇಜು ವಿದ್ಯಾರ್ಥಿಗಳು ಹದಿಹರೆಯ ವಿದ್ಯಾರ್ಥಿಗಳಾಗಿದ್ದು, ಇವರಲ್ಲಿ ಹೆಚ್ಚಿನ ಕುತೂಹಲ, ಅನುಕರಣೆ, ಸೆಳೆತ ಹೆಚ್ಚಾಗಿರುತ್ತದೆ. ಒಳ್ಳೆಯದು, ಕೆಟ್ಟದು ಎಂಬುವುದು ತಿಳಿಯದ ವಯಸ್ಸು. ಹಾಗಾಗಿ ನಿಮಗೆ ಮದ್ಯ ಮತ್ತು ಮಾದಕ ವಸ್ತುಗಳ ದುಷ್ಪರಿಣಾಮಗಳ ಕುರಿತು ಜಾಗೃತಿ ಮೂಡಿಸಲಾಗುತ್ತದೆ ಎಂದರು.

ಜಾಹೀರಾತುಗಳನ್ನು ನೋಡಿ ಪ್ರಭಾವಿತರಾಗಿ, ಕ್ಷಣಿಕ ಸುಖಕ್ಕೆ ಬಲಿಯಾಗಬೇಡಿ. ಕುತೂಹಲ, ಆಕರ್ಷಣೆಯಿಂದ ಶುರು ಮಾಡಿದ ಕ್ಷಣಿಕ ಕಾಲದ ಕಿಕ್ ಅದು ಹವ್ಯಾಸವಾಗಿ ಬದಲಾವಣೆಯಾಗುತ್ತದೆ. ಇದರಿಂದ ಮಾನಸಿಕ ಹಾಗೂ ದೈಹಿಕ, ಸಾಮಾಜಿಕವಾಗಿ ಬಹಳ ದೊಡ್ಡ ಪರಿಣಾಮ ಬೀರಲಿದೆ. ಹಾಗಾಗಿ ಯುವ ಜನತೆ ತಮ್ಮ ಮನಸ್ಸನ್ನು ಒಳ್ಳೆಯದರ ಕಡೆ ಗಮನಹರಿಸಬೇಕು. ಆರೋಗ್ಯಕರ ಜೀವನಶೈಲಿ ರೂಢಿಸಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು.ಬಾಲಕರ ಸರ್ಕಾರಿ ಪದವಿಪೂರ್ವ ಕಾಲೇಜು ಪ್ರಾಂಶುಪಾಲ ಹೆಚ್.ಬಿ.ನರಸಿಂಹಮೂರ್ತಿ ಮಾತನಾಡಿ, ವಿದ್ಯಾರ್ಥಿಗಳು ಉತ್ತಮ ವ್ಯಾಸಂಗದ ಕಡೆ ಗಮನಹರಿಸಬೇಕು. ಯಾವುದೇ ಕಾರಣಕ್ಕೂ ದುಶ್ಚಟಗಳಿಗೆ ಬಲಿಯಾಗಬಾರದು. ದುಶ್ಚಟಗಳಿಗೆ ಬಲಿಯಾದವರ ಬದುಕು ನಿಜಕ್ಕೂ ನರಕಯಾತನೆಯ ಪರಿಸ್ಥಿತಿಯಾಗಿದೆ. ನನ್ನ ಅಂತಿಮ ದಿನದವರೆಗೂ ಮಾದಕ ವಸ್ತುಗಳಿಗೆ ದಾಸರಾಗುವುದಿಲ್ಲ ಎಂದು ವಿದ್ಯಾರ್ಥಿಗಳು ಶಪಥ ಮಾಡಬೇಕು ಎಂದು ತಿಳಿಸಿದ ಅವರು, ಮದ್ಯ ಮತ್ತು ಮಾದಕ ವಸ್ತುಗಳ ದುಷ್ಪರಿಣಾಮಗಳ ಕುರಿತು ಕುಟುಂಬ ಹಾಗೂ ನೆರೆಹೊರೆಯವರೆಗೂ ಜಾಗೃತಿ ಮೂಡಿಸುವ ಕೆಲಸ ಮಾಡಬೇಕು ಎಂದು ಸಲಹೆ ನೀಡಿದರು.ಜಿಲ್ಲಾ ವಾರ್ತಾಧಿಕಾರಿ ಬಿ.ವಿ.ತುಕಾರಾಂರಾವ್ ಮಾತನಾಡಿ, ದೇಶ ವಿದೇಶಗಳಲ್ಲಿ ಸಂಚರಿಸಿ, ಜನರಲ್ಲಿನ ದುಶ್ಚಟಗಳನ್ನು ತಮ್ಮ ಜೋಳಿಗೆಯಲ್ಲಿ ಭಿಕ್ಷೆಯ ರೂಪದಲ್ಲಿ ಸಂಗ್ರಹಿಸಿ, ವ್ಯಸನಮುಕ್ತ ಸಮಾಜಕ್ಕೆ ಶ್ರಮಿಸಿದ ಡಾ.ಮಹಾಂತ ಶಿವಯೋಗಿಗಳ ಜನ್ಮ ದಿನವನ್ನು ಸರ್ಕಾರದ ವತಿಯಿಂದ ವ್ಯಸನಮುಕ್ತ ದಿನಾಚರಣೆಯನ್ನಾಗಿ ಕಳೆದ ಆಗಸ್ಟ್ 01ರಂದು ಜಿಲ್ಲಾ ಕೇಂದ್ರ ಹಾಗೂ ತಾಲ್ಲೂಕು ಮಟ್ಟಗಳಲ್ಲಿಯೂ ಆಚರಿಸಲಾಗಿದೆ.

## ಫಾಸ್ಟ್ ನ್ಯೂಸ್



ಶ್ರಾವಣ ಮಾಸದ ಕಡೆ ಶನಿವಾರ ಹಿನ್ನೆಲೆಯಲ್ಲಿ ಚಳ್ಳಕೆರೆ ನಗರದ ಕರೇಕಲ್ ಆಂಜನೇಯಸ್ವಾಮಿ ದೇವಸ್ಥಾನದಲ್ಲಿ ವಿಶೇಷ ಪೂಜಾ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದರು. ನೂರಾರು ಭಕ್ತರು ಆಗಮಿಸಿ ಶ್ರೀಸ್ವಾಮಿಯ ದರ್ಶನ ಪಡೆದರು. ಶ್ರಾವಣಮಾಸದ ಹಿನ್ನೆಲೆಯಲ್ಲಿ ಆಂಜನೇಯಸ್ವಾಮಿಗೆ ವಿಶೇಷ ಹೂಗಳಿಂದ ಅಲಂಕರಿಸಲಾಗಿತ್ತು. ಅರ್ಚಕನಾಗಶಯನಗೌತಮ್, ಹೇಮಂತಗೌತಮ್, ಸಿ.ಎಸ್.ಗೋಪಿನಾಥ, ಭೀಮರಾಜ್, ಚಂದ್ರಶೇಖರ್, ಪ್ರಕಾಶ್ ಮೊದಲಾದವರು ಪೂಜಾ ಕಾರ್ಯದಲ್ಲಿ ಭಾಗವಹಿಸಿದ್ದರು.

## ಬೈಕ್‌ನಿಂದ ಬಿದ್ದು ಗಾಯಗೊಂಡಿದ್ದ ರತ್ನಮ್ಮ ಬೆಂಗಳೂರಿನಲ್ಲಿ ಸಾವು

» **ಚಳ್ಳಕೆರೆ**

ತಾಲ್ಲೂಕಿನ ದುಗ್ಗಾವರ ಗ್ರಾಮದ ರಸ್ತೆಯಲ್ಲಿ ಮೋಟಾರ್ ಬೈಕ್ ಅಪಘಾತದಲ್ಲಿ ಗಾಯಗೊಂಡಿದ್ದ ಘಟಪರ್ತಿ ಗ್ರಾಮದ ರತ್ನಮ್ಮ(45) ಚಿಕಿತ್ಸೆ ಫಲಕಾರಿಯಾಗದೆ ಬೆಂಗಳೂರು ನಿಮಾನ್ಸ್ ಆಸ್ಪತ್ರೆಯಲ್ಲಿ ಮೃತಪಟ್ಟಿರುತ್ತಾರೆ. ಘಟಪರ್ತಿಯ ಜಿ.ಶಶಿಕುಮಾರ್ ಎಂಬುವವರು ಈ ಬಗ್ಗೆ ದೂರು ನೀಡಿ, ನನ್ನ ತಾಯಿ ರತ್ನಮ್ಮ ಮಂಜುನಾಥ ಎಂಬುವವರಿಗೆ ಸೇರಿದ ಮೋಟಾರ್ ಬೈಕ್‌ನಲ್ಲಿ ಪ್ರಯಾಣಿಸುವಾಗ ದುಗ್ಗಾವರ ಗ್ರಾಮದ ಟಾರ್ ರಸ್ತೆಯಲ್ಲಿ ಕೆಳಗೆ ಬಿದ್ದು ಗಾಯಗೊಂಡು ಚಳ್ಳಕೆರೆ, ಚಿತ್ರದುರ್ಗ, ಬೆಂಗಳೂರು ಆಸ್ಪತ್ರೆಗೆ ದಾಖಲಾಗಿ ಚಿಕಿತ್ಸೆ ಪಡೆದಿದ್ದರೂ ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿರುತ್ತಾರೆ. ಠಾಣಾಧಿಕಾರಿ ಶಿವಣ್ಣ ಪ್ರಕರಣ ದಾಖಲಿಸಿ ತನಿಖೆ ನಡೆಸುತ್ತಿದ್ದಾರೆ.

## ತಂಬಾಕು ಸೇವನೆ ದುಷ್ಪರಿಣಾಮ ಕುರಿತು ಜಾಗೃತಿ



» **ಚಳ್ಳಕೆರೆ**

ನಗರದ ವಿವಿಧ ಭಾಗಗಳ ಟೀ ಅಂಗಡಿ, ಬೀಡಾಶಾಪ್‌ಗಳಿಗೆ ಭೇಟಿ ನೀಡಿದ್ದ ಜಿಲ್ಲಾ, ತಾಲ್ಲೂಕು ತಂಬಾಕು ನಿಯಂತ್ರಣ ಮಂಡಳಿ ಅಧಿಕಾರಿಗಳು ತಂಬಾಕು ಸೇವನೆಯಿಂದ ಆಗುವ ದುಷ್ಪರಿಣಾಮಗಳ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸಿದರು. ಆರೋಗ್ಯ ನಿರೀಕ್ಷಣಾಧಿಕಾರಿ ಅಮೃತ್‌ರಾಜ್ ಮಾಹಿತಿ ನೀಡಿ, ತಂಬಾಕು ಸೇವನೆಯಿಂದ ದೇಹ ದುರ್ಬಲಗೊಳ್ಳುತ್ತದೆಯಲ್ಲದೆ, ಉಸಿರಾಟದ ತೊಂದರೆಯೂ ಸೇರಿದಂತೆ ಅನೇಕ ಸಮಸ್ಯೆಗಳನ್ನು ಎದುರಿಸಬೇಕಾಗುತ್ತದೆ. ಈ ಹಿನ್ನೆಲೆಯಲ್ಲಿ ತಂಬಾಕು ಸೇವನೆಯಿಂದ ದೂರವಿದ್ದು, ಉತ್ತಮ ಆರೋಗ್ಯ ಕಾಪಾಡಿಕೊಳ್ಳಬೇಕು ಎಂದರು. ಅಂಗಡಿಗಳಲ್ಲಿ ಮಾರಾಟ ಮಾಡದಂತೆ ತಾಕೀತು ಮಾಡಿದರು. ತಂಡದಲ್ಲಿ ಆರೋಗ್ಯ ನಿರೀಕ್ಷಣಾಧಿಕಾರಿ ಸಂಜಯ್, ನಗರಸಭಾ ಆರೋಗ್ಯ ನಿರೀಕ್ಷಕ ರುದ್ರಮುನಿ ಮುಂತಾದವರು ದಾಳಿಯಲ್ಲಿ ಭಾಗವಹಿಸಿದ್ದರು.

## ಮೀನುಗಾರಿಕೆ ಇಲಾಖೆ: ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನ

» **ಚಿತ್ರದುರ್ಗ**

ಮೀನುಗಾರಿಕೆ ಇಲಾಖೆ ವತಿಯಿಂದ 2024–25ನೇ ಸಾಲಿನಲ್ಲಿ ಜಿಲ್ಲಾವಲಯ ಮತ್ತು ರಾಜ್ಯವಲಯ ಯೋಜನೆಯಡಿ ಫಲಾನುಭವಿ ಆಧಾರಿತ ಯೋಜನೆಗಳಾದ ಬಾವಿ ಮತ್ತು ಹೊಂಡಗಳಿಗೆ ಉಚಿತ ಮೀನುಮರಿ ಸರಬರಾಜು, ಮೀನುಮರಿ ಖರೀದಿಗೆ ಸಹಾಯ, ಮೀನು ಮಾರಾಟಕ್ಕೆ ದ್ವಿಚಕ್ರ ವಾಹನ ಖರೀದಿಗೆ ಸಹಾಯ, ಮೀನುಗಾರಿಕೆ ಸಲಕರಣೆ ಕಿಟ್ಟು ಪಡೆಯಲು ಸಹಾಯ ಇತ್ಯಾದಿ ಯೋಜನೆಗಳಲ್ಲಿ ಪ್ರಯೋಜನ ಪಡೆಯಲು ಆಸಕ್ತರಿಂದ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಆಯಾ ತಾಲ್ಲೂಕಿನ ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ ಎಂದು ಮೀನುಗಾರಿಕೆ ಉಪನಿರ್ದೇಶಕರು ತಿಳಿಸಿದ್ದಾರೆ.

### ಕರ್ನಾಟಕ ಭೂ ಕಬಳಿಕೆ ನಿಷೇಧ ಅಧಿನಿಯಮ ಮತ್ತು ಕಾಯ್ದೆಗಳ ಬಗ್ಗೆ ಕಾರ್ಯಾಗಾರದಲ್ಲಿ ನ್ಯಾ.ಬಿ.ಎ.ಪಾಟೀಲ್

# ಸರ್ಕಾರಿ ಆಸ್ತಿ ರಕ್ಷಣೆ: ಜೂನ್ ತಿಂಗಳಲ್ಲಿ 224.4 ಎಕರೆ ಒತ್ತುವರಿ ಜಮೀನು ಮರಳಿ ಸರ್ಕಾರದ ಸುಪರ್ದಿಗೆ

» **ಚಿತ್ರದುರ್ಗ**

ಕಳೆದ ಜೂನ್ ತಿಂಗಳೊಂದರಲ್ಲಿಯೇ ವಿಶೇಷ ನ್ಯಾಯಾಲಯದ ಮುಂದೆ ಇದ್ದ ಹಲವು ಪ್ರಕರಣಗಳನ್ನು ಇತ್ಯರ್ಥ ಮಾಡುವ ಮೂಲಕ, ರಾಜ್ಯಾದ್ಯಂತ ಭೂ ಕಬಳಿಕೆಯಾಗಿದ್ದ 224.4 ಎಕರೆ ಒತ್ತುವರಿ ಜಮೀನನ್ನು ಮರಳಿ ಸರ್ಕಾರದ ಸುಪರ್ದಿಗೆ ವಹಿಸಿ ಆದೇಶ ನೀಡಲಾಗಿದೆ ಎಂದು ಕರ್ನಾಟಕ ಭೂ ಕಬಳಿಕೆ ನಿಷೇಧ ವಿಶೇಷ ನ್ಯಾಯಾಲಯದ ಅಧ್ಯಕ್ಷರಾದ ನ್ಯಾಯಮೂರ್ತಿ ಬಿ.ಎ. ಪಾಟೀಲ್ ಹೇಳಿದರು.

ನಗರದ ಜಿಲ್ಲಾ ಪಂಚಾಯತಿ ಸಭಾಂಗಣದಲ್ಲಿ ಶನಿವಾರ ಕರ್ನಾಟಕ ಭೂ ಕಬಳಿಕೆ ನಿಷೇಧ ಅಧಿನಿಯಮ ಮತ್ತು ಸಂಬಂಧಿಸಿದ ಕಾಯ್ದೆಗಳ ಕುರಿತು ಆಯೋಜಿಸಲಾದ ಒಂದು ದಿನದ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಅಧಿಕಾರಿಗಳ ಪ್ರಯತ್ನದ ಫಲವಾಗಿ ಕೋಟ್ಯಾಂತರ ರೂಪಾಯಿ ಮೌಲ್ಯದ 224.4 ಎಕರೆ ಜಮೀನು ಸರ್ಕಾರಕ್ಕೆ ಮರಳಿ ದೊರಕಿದೆ. ಸದ್ಯ ಸ್ಮಶಾನ ಹಾಗೂ ಸಾರ್ವಜನಿಕ ಉಪಯೋಗಕ್ಕೆ ಜಾಗ ಬೇಕು ಎಂದರೆ, ಸರ್ಕಾರ ಹಣ ನೀಡಿ ಭೂಮಿ ಕೊಂಡುಕೊಳ್ಳಬೇಕಾದ ಪರಿಸ್ಥಿತಿ ಎದುರಾಗಿದೆ. ಕರ್ನಾಟಕ ಭೂ ಕಬಳಿಕೆ ನಿಷೇಧ ಅಧಿನಿಯಮ ಬಲಿಷ್ಠ ಹಾಗೂ ಪರಿಣಾಮಕಾರಿಯಾಗಿದೆ. ಅಧಿಕಾರಿಗಳು ಕಾಯ್ದೆ ಬಗ್ಗೆ ಸಂಪೂರ್ಣ ಮಾಹಿತಿ ತಿಳಿದುಕೊಂಡು, ಸರ್ಕಾರಿ ಭೂಮಿಯ ರಕ್ಷಣೆಗೆ ಕಾರ್ಯ ಪ್ರವೃತ್ತರಾಗಬೇಕು. ಅಧಿಕಾರಿಗಳು ಭೂ ಕಬಳಿಕೆ ಅಥವಾ ಒತ್ತುವರಿ ಗಮನಕ್ಕೆ ಬಂದರೆ, ವಿಶೇಷ ನ್ಯಾಯಾಲಯಕ್ಕೆ ಫಾರಂ 1 ರಲ್ಲಿ ಅರ್ಜಿ ಸಲ್ಲಿಸಿದರೆ ಸಾಕು, ಕಾನೂನಿನ ಪ್ರಕಾರ ಮುಂದಿನ ಕ್ರಮ ಕೈಗೊಳ್ಳಲಾಗುವುದು. ಯಾವುದೇ ಒತ್ತಡ ಹಾಗೂ ಪ್ರಭಾವಗಳಿಗೆ ಮಣಿಯುವ ಅವಶ್ಯಕತೆ ಇಲ್ಲ. ಭೂ ಕಬಳಿಕೆಯ ಬಗ್ಗೆ ಮಾಹಿತಿ ಬಂದರೂ ಸಹ, ವಿಶೇಷ ನ್ಯಾಯಾಲಯ ಸ್ವಇಚ್ಛೆಯಿಂದ ಪ್ರಕರಣ ದಾಖಲಿಸಿಕೊಂಡು ವಿಚಾರಣೆ ನಡೆಸುವುದು. ಒಂದು ವೇಳೆ ಭೂ ಒತ್ತುವರಿ ಕಂಡು ಬಂದರೂ ಸಹ ಅಧಿಕಾರಿಗಳು ಕ್ರಮ ಕೈಗೊಳ್ಳದೇ ನಿರ್ಲಕ್ಷ್ಯ ತೋರಿದರೆ, ಭೂ ಕಬಳಿಕೆ ನಿಷೇಧ ಅಧಿನಿಯಮದಡಿ, ಭೂ ಒತ್ತುವರಿಗೆ ಪ್ರೋತ್ಸಾಹ ನೀಡಿದ್ದಾರೆ ಎಂದು ಪರಿಗಣಿಸಿ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧವೂ ಪ್ರಕರಣ ದಾಖಲಿಸಲಾಗುವುದು ಎಂದು ನ್ಯಾಯಮೂರ್ತಿ ಬಿ.ಎ.ಪಾಟೀಲ್ ಎಚ್ಚರಿಸಿದರು.

ವಿಶೇಷ ನ್ಯಾಯಾಲಯದಲ್ಲಿ ಮಾಧ್ಯಮ ವರದಿಗಳನ್ನು ಆಧರಿಸಿ ಸಾಕಷ್ಟು ಭೂ ಕಬಳಿಕೆ ಪ್ರಕರಣಗಳನ್ನು ದಾಖಲಿಸಿಕೊಳ್ಳಲಾಗಿದೆ. ಹೀಗೆ ದಾಖಲಾದ ಹಲವು ಪ್ರಕರಣಗಳಲ್ಲಿ ಭೂ ಒತ್ತುವರಿಯನ್ನು ಸಹ ತೆರವುಗೊಳಿಸಲಾಗಿದೆ. ಮಲಪ್ರಭಾ ನದಿ ದಂಡೆ ಒತ್ತುವರಿ ಕುರಿತು ಮಾಧ್ಯಮಗಳಲ್ಲಿ ವರದಿ ಬಿತ್ತರವಾಗಿತ್ತು. ಇದನ್ನು ಆಧರಿಸಿ ನ್ಯಾಯಾಲಯ ಸ್ವ ಇಚ್ಛೆಯಿಂದ ಪ್ರಕರಣ ಕೈಗೆತ್ತಿಕೊಂಡಿದೆ, ಈ ಬಗ್ಗೆ ಒಟ್ಟು 1800 ಹೆಚ್ಚು ಪ್ರಕರಣಗಳು ದಾಖಲಾಗಿವೆ. ಚಿಕ್ಕಮಗಳೂರು ಜಿಲ್ಲೆಯ ಹುಲಿ ಸಂರಕ್ಷಿತ ಅರಣ್ಯ ಪ್ರದೇಶ ಒತ್ತುವರಿ ಸಂಬಂಧ ಮಾಧ್ಯಮ ವರದಿ ಆಧರಿಸಿ 17 ಪ್ರಕರಣಗಳನ್ನು ದಾಖಲಿಸಲಾಗಿದೆ. ನ್ಯಾಯಾಂಗ, ಕಂದಾಯ, ಭೂ ಸರ್ವೆ, ಪೊಲೀಸ್ ಹಾಗೂ ಅರಣ್ಯ ಇಲಾಖೆಗಳು ಒಟ್ಟಾಗಿ ಬಿಗಿ ಮುಷ್ಠಿಯಿಂದ ಸರ್ಕಾರಿ ಭೂಮಿಯನ್ನು ರಕ್ಷಿಸಿದರೆ, ಎಂತಹುದೇ ವ್ಯಕ್ತಿ ಅಥವಾ ಸಮೂಹಗಳಿಂದಲೂ ಭೂ ಕಬಳಿಕೆ ಮಾಡಲು ಸಾಧ್ಯವಿಲ್ಲ ಎಂದು ನ್ಯಾಯಮೂರ್ತಿ ಬಿ.ಎ.ಪಾಟೀಲ್ ಅಭಿಪ್ರಾಯ ವ್ಯಕ್ತಪಡಿಸಿದರು.

ಜಿಲ್ಲೆಯಲ್ಲಿ ಕೆರೆಗಳ ಸರಹದ್ದುಗಳನ್ನು ಗೊತ್ತುಪಡಿಸಿ ಏರಿಗಳನ್ನು ನಿರ್ಮಿಸುವ ಮೂಲಕ, ಕೆರೆಗಳ ಒತ್ತುವರಿ ತೆರವಿಗೆ ಅಧಿಕಾರಿಗಳು ಪ್ರಯತ್ನಿಸಬೇಕು. ಭೂ ಪರಿವರ್ತನೆ ನೀಡುವ ಪ್ರಾಧಿಕಾರಗಳು ಕೆರೆ ಹಾಗೂ ಸರ್ಕಾರಿ ಭೂಮಿ ಒತ್ತುವರಿ ಕುರಿತು ಪರಿಶೀಲನೆ ನಡೆಸಿ, ನಂತರ ಅನುಮತಿ ನೀಡುವಂತೆ ನ್ಯಾಯಮೂರ್ತಿ ಬಿ.ಎ.ಪಾಟೀಲ್ ಸೂಚಿಸಿದರು.

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷ ರೋಣ್ ವಾಸುದೇವ್ ಮಾತನಾಡಿ, ಎಲ್ಲಾ ಇಲಾಖೆಗಳು ಸಮನ್ವಯದಿಂದ ಕಾರ್ಯ ನಿರ್ವಹಿಸುವ ಮೂಲಕ, ಕೆರೆ, ಅರಣ್ಯ ಹಾಗೂ ಕಂದಾಯ ಭೂಮಿ ಒತ್ತುವರಿ ಮಾಡಿ ದುರ್ಲಾಭ ಪಡೆಯುತ್ತಿರುವ ಪಟ್ಟಭದ್ರ ವ್ಯಕ್ತಿಗಳನ್ನು ಕಾನೂನಿನ ಚೌಕಟ್ಟಿಗೆ ತರುವ ಕೆಲಸ ಮಾಡಬೇಕು. ಅತಿಕ್ರಮಣ ತೆರವುಗೊಳಿಸಿ ಸರ್ಕಾರಕ್ಕೆ ಆಸ್ತಿ ಮರಳಿಸಬೇಕು. ಮಾಧ್ಯಮಗಳು ಸಹ ಸರ್ಕಾರಿ ಭೂ ಕಬಳಿಕೆ ಕುರಿತು ವಿಸ್ತೃತ ವರದಿ ಪ್ರಕಟಿಸುವ ಮೂಲಕ ನ್ಯಾಯಾಲಯಗಳ ಗಮನ ಸೆಳೆಯಬೇಕು. ಇದನ್ನು ಆಧರಿಸಿ ನ್ಯಾಯಾಲಯಗಳು ಪ್ರಕರಣ ದಾಖಲಿಸಿ, ತನಿಖೆಗೆ ಆದೇಶಿಸಿ ಸರ್ಕಾರಿ ಭೂಮಿ ರಕ್ಷಣೆಯನ್ನು ಮಾಡಲು ಸಹಕಾರಿಯಾಗಲಿದೆ ಎಂದರು.

ಚಿತ್ರದುರ್ಗ ಜಿಲ್ಲೆ ಬರ ಪೀಡಿತ ಪ್ರದೇಶವಾಗಿದ್ದು, ಕೆರೆಗಳ ಒತ್ತುವರಿ ಮೋಜಣಿ ಮಾಡುವುದು ಅಗತ್ಯವಿದೆ. ಕೆರೆ ಒತ್ತುವರಿ ನಿರ್ವಹಣೆ ಸಮಿತಿ ಅಧ್ಯಕ್ಷನಾಗಿ ಸದ್ಯದಲ್ಲೇ ಕೆರೆಗಳ ಮೋಜಣಿ ಕ್ರಮ ಕೈಗೊಳ್ಳುವುದಾಗಿ ನ್ಯಾಯಾಧೀಶ ರೋಣ್ ವಾಸುದೇವ್ ಹೇಳಿದರು.

ಉದ್ಘಾಟನೆ ಸಮಾರಂಭದಲ್ಲಿ ಭೂ ಮಾಪನ ಕಂದಾಯ ವ್ಯವಸ್ಥೆ ಹಾಗೂ ಭೂದಾಖಲೆಗಳ ಅಪರ ನಿರ್ದೇಶಕ ಕೆ.ಜಯಪ್ರಕಾಶ್, ಭೂ ಕಬಳಿಕೆ ನಿಷೇಧ ವಿಶೇಷ ನ್ಯಾಯಲಯದ ಕಂದಾಯ ಸದಸ್ಯರಾದ ಎಸ್.ಪಾಲಯ್ಯ, ಅಶ್ವತ್ಥನಾರಾಯಣ ಗೌಡ.ಕೆ.ಹೆಚ್, ವಿಲೇಖನಾಧಿಕಾರಿ ಹೆಚ್.ಕೆ.ನವೀನ್, ಪೊಲೀಸ್ ಅಧೀಕ್ಷಕ ರಂಜೀತ್ ಕುಮಾರ್ ಬಂಡಾರು, ಹೆಚ್ಚುವರು ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ ಉಪಸ್ಥಿತರಿದ್ದರು. ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಸ್ವಾಗತಿಸಿದರು. ಉಪವಿಭಾಗಾಧಿಕಾರಿ ಎಂ.ಕಾರ್ತಿಕ್ ವಂದನೆ ಸಲ್ಲಿಸಿದರು.

ಕಾರ್ಯಾಗಾರದಲ್ಲಿ ಜಿಲ್ಲಾ ಪಂಚಾಯಿತಿ, ಕಂದಾಯ, ಅರಣ್ಯ, ನಗರಾಭಿವೃದ್ಧಿ, ಪೊಲೀಸ್, ಶಿಕ್ಷಣ ಇಲಾಖೆ ಹಾಗೂ ಪೌರಾಡಳಿತ ಇಲಾಖೆ ಅಧಿಕಾರಿಗಳು ಭಾಗವಹಿಸಿದ್ದರು.




## 72 ಸಾವಿರ ಹೆಕ್ಟೇರ್ ಕಂದಾಯ ಭೂಮಿ ಒತ್ತುವರಿ: ಡಿಸಿ

ಚಿತ್ರದುರ್ಗ ಜಿಲ್ಲೆಯಲ್ಲಿ 7,70,702 ಹೆಕ್ಟೇರ್ ವಿಶಾಲ ಪ್ರದೇಶದಲ್ಲಿ, 2,06,594 ಹೆಕ್ಟೇರ್ ಜಾಗ ಕಂದಾಯ ಇಲಾಖೆ ಸುಪರ್ದಿಯಲ್ಲಿದೆ. ಇದರಲ್ಲಿ ಸುಮಾರು 72,000 ಹೆಕ್ಟೇರ್ ನಷ್ಟು ಜಾಗ ಒತ್ತುವರಿಯಾಗಿದೆ ಎಂಬ ಮಾಹಿತಿ ಇದೆ. ಈ ಒತ್ತುವರಿ ಜಾಗಗಳಿಗೆ ಫಾರಂ 50, 53 ಹಾಗೂ 57 ಅಡಿ ಭೂಮಿ ಮಂಜೂರಿಗೆ ಸಾಕಷ್ಟು ಜನರು ಅರ್ಜಿ ಸಲ್ಲಿಸಿದ್ದಾರೆ. ಚಿತ್ರದುರ್ಗ ಹಿಂದುಳಿದ ಜಿಲ್ಲೆ, 3 ಎಕರೆಗಿಂತ ಕಡಿಮೆ ಜಾಗ ಒತ್ತುವರಿಯಾಗಿದ್ದು, ಅದನ್ನು ತೆರವು ಮಾಡುವುದರಿಂದ ಜೀವನ ಆಧಾರಕ್ಕೆ ತೊಂದರೆಯಾಗುತ್ತದೆ ಎನ್ನುವ ಅಂಶಗಳ ಹಿನ್ನೆಲೆಯಲ್ಲಿ ಈ ಒತ್ತುವರಿ ತೆರವುಗೊಳಿಸಿರಲಿಕ್ಕಿಲ್ಲ. ಈ ಎಲ್ಲಾ ಅಂಶಗಳ ಹೊರತಾಗಿಯೂ ಒತ್ತುವರಿಯಾದ 72,000 ಹೆಕ್ಟೇರ್ ಪೈಕಿ 15,000 ಹೆಕ್ಟೇರ್ ಭೂಮಿ ಒತ್ತುವರಿ ತೆರವುಗೊಳಿಸಲು ಸಾಧ್ಯವಿದೆ ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಮಾಹಿತಿ ನೀಡಿದರು. ಕಂದಾಯ ಇಲಾಖೆ ಭೂಮಿ ಹೊರತಾಗಿ ಅರಣ್ಯ, ಮುಜುರಾಯಿ, ಸ್ಮಶಾನ, ಕೆರೆ ಒತ್ತುವರಿ ಪ್ರಕರಣಗಳು ಜಿಲ್ಲೆಯಲ್ಲಿವೆ. ವಿಶೇಷ ಭೂ ಕಬಳಿಕೆ ನಿಷೇಧ ನ್ಯಾಯಾಲಯ, ಸುಪ್ರಿಂಕೋರ್ಟ್ ಹಸಿರು ನ್ಯಾಯಾಲಯಗಳ ಆದೇಶವಿದ್ದರೂ, ಕೆರೆ ಒತ್ತುವರಿ ಪೂರ್ಣ ಪ್ರಮಾಣದಲ್ಲಿ ತೆರವು ಆಗಿಲ್ಲ. ಜಿಲ್ಲೆಯಲ್ಲಿ ಮಳೆ ಬೀಳುವ ಪ್ರಮಾಣ ಕಡಿಮೆಯಿದೆ. ಅಂತರ್ಜಲ ಮಟ್ಟ ಕೂಡ ಕುಸಿದಿದೆ. ಸಣ್ಣ ನೀರಾವರಿ, ಜಲಾನಯನ ಸೇರಿದಂತೆ, ಕೆ.ಎಂ.ಇ.ಆರ್.ಸಿ ಹಾಗೂ ಡಿ.ಎಂ.ಎಫ್ ನಿಧಿಗಳ ಅಡಿ ಸಾವಿರಾರು ಚೆಕ್ ಡ್ಯಾಂಗಳನ್ನು ನಿರ್ಮಿಸಲಾಗಿದೆ. ದುರಂತವೆಂದರೆ ಈ ಜಲಮೂಲಗಳ ಸಂಗ್ರಹಕ್ಕೆ ಬೇಕಾದ ಕೆರೆಗಳೇ ಒತ್ತುವರಿಯಾಗಿವೆ. ಇದರಿಂದ ಹಣವೂ ವ್ಯರ್ಥವಾಗುತ್ತಿದೆ ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಬೇಸರ ವ್ಯಕ್ತಪಡಿಸಿದರು. ಚಳ್ಳಕೆರೆ ಹಾಗೂ ಚಿತ್ರದುರ್ಗ ನಗರದ ಮೂಲ ನಕ್ಷೆಯಲ್ಲಿ ನಗರದ ಪ್ರಮುಖ ಬೀದಿಗಳು ಈಗಿರುವ ವಿಸ್ತೀರ್ಣದ ನಾಲ್ಕರಷ್ಟು ಅಗಲವಾಗಿವೆ. ಆದರೆ ಒತ್ತುವರಿಯಿಂದ ಇಂದು ಕಿರಿದಾಗಿವೆ. ಭೂ ಕಬಳಿಕೆ, ಅಧಿಕಾರಿಗಳ ನಿರ್ಲಕ್ಷ್ಯ ಇದಕ್ಕೆ ಕಾರಣವೆನ್ನಬಹುದಾಗಿದೆ. ಒತ್ತುವರಿ ಜಾಗ ತೆರವು ಗೊಳಿಸದೇ, ಅವುಗಳಿಗೆ ಖಾತೆ ಮಾಡಿಕೊಡಲಾಗಿದೆ. ಇಂದರಿಂದಾಗಿ ಒತ್ತುವರಿದಾರರು ನ್ಯಾಯಾಲಯಗಳಲ್ಲಿ ಮೊಕದ್ದಮೆ ಹೂಡಿ ಕೂತಿದ್ದಾರೆ. ನಗರದ ಹಳೆಯ ಭೂ ನಕ್ಷೆಯ ಪ್ರಕಾರ ಒಂದು ನಯಾಪೈಸೆ ಪರಿಹಾರ ನೀಡದೇ ಚಿತ್ರದುರ್ಗ ಹಾಗೂ ಹಿರಿಯೂರು ನಗರಗಳಲ್ಲಿ ಒತ್ತುವರಿ ತೆರವುಗೊಳಿಸಬಹುದಾಗಿದೆ. ಚಳ್ಳಕೆರೆ ನಗರದಲ್ಲಿ ಈಗಾಗಲೇ ಒತ್ತುವರಿ ತೆರವು ಕಾರ್ಯಾಚರಣೆ ನಡೆಸಲಾಗಿದೆ ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ ಹೇಳಿದರು.

ಈ ಕಾರ್ಯಾಗಾರಕ್ಕೆ ಎಲ್ಲಾ ಇಲಾಖೆ ಅಧಿಕಾರಿಗಳನ್ನು ಆಹ್ವಾನಿಸಲಾಗಿದೆ. ಏಕೆಂದರೆ ಎಲ್ಲಾ ಇಲಾಖೆಗಳಿಗೂ ಸರ್ಕಾರಿ ಜಾಗಗಳನ್ನು ಮಂಜೂರು ಮಾಡಿ ವಶಕ್ಕೆ ನೀಡಲಾಗಿದೆ. ಈ ಜಾಗಗಳ ರಕ್ಷಣೆ ಹೊಣೆ ಆಯಾ ಇಲಾಖೆ ಅಧಿಕಾರಿಗಳ ಜವಾಬ್ದಾರಿಯಾಗಿದೆ. ಭೂ ರಕ್ಷಣೆ ಸಂಬಂದಿಸಿದಂತೆ, ಭೂ ಕಬಳಿಕೆ ನಿಷೇಧ, ಮೋಜಣಿ, ಕರ್ನಾಟಕ ಭೂ ಕಂದಾಯ, ನಗರ ಪಾಲಿಕೆ, ಪಂಚಾಯತ್ ರಾಜ್, ಕೆರೆ ಸಂರಕ್ಷಣೆ ಅಭಿವೃದ್ಧಿ ಪ್ರಾಧಿಕಾರ, ಅರಣ್ಯ ಸಂರಕ್ಷಣೆ, ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮದಾಯ ದತ್ತಿ ಹಾಗೂ ವಕ್ಫ್ ಅಧಿನಿಯಮಗಳನ್ನು ಸರ್ಕಾರ ಜಾರಿಗೊಳಿಸಿದೆ. ಈ ಕಾಯ್ದೆಗಳನ್ನು ಬಳಸಿ ಭೂ ಒತ್ತುವರಿ ತಡೆಯುವುದು ಹೇಗೆ ಎಂಬುದನ್ನು ಕಾರ್ಯಾಗಾರದಲ್ಲಿ ತಿಳಿಸಿಕೊಡಲಾಗುವುದು. ಅನಧಿಕೃತ ಭೂ ದಾಖಲೆಗಳನ್ನು ನ್ಯಾಯಾಲಯಕ್ಕೆ ಸಲ್ಲಿಸಿ ಸರ್ಕಾರಿ ಭೂಮಿಯನ್ನು ಮಂಜೂರು ಮಾಡಿಸಿಕೊಳ್ಳಲು ಆದೇಶ ಪಡೆದ ಉದಾಹರಣೆಗಳು ಸಾಕಷ್ಟಿವೆ. ನ್ಯಾಯಲಯಕ್ಕೆ ಸಲ್ಲಿಸುವ ಭೂದಾಖಲೆಗಳು ಅಧಿಕೃತವಾಗಿರಬೇಕು. ಈ ಹಿನ್ನಲೆಯಲ್ಲಿ ಅಧಿಕಾರಿಗಳು ಸರ್ಕಾರಿ ಭೂಮಿಯನ್ನು ಮಂಜೂರು ಮಾಡುವಾಗ ಜಾಗರೂಕರಾಗಿರಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಹೇಳಿದರು.

# ಸಾರ್ವಜನಿಕ ಅನುಕೂಲಕ್ಕಾಗಿ ಹೆಚ್ಚುವರಿ ಬಸ್: ಶಾಸಕ

**ಚಳ್ಳಕೆರೆ:** ಗ್ರಾಮೀಣ ಭಾಗದ ಸಾರ್ವಜನಿಕರ ಹಿತಕ್ಕಾಗಿ ಬಸ್ ಸೌಲಭ್ಯಗಳನ್ನು ಹೆಚ್ಚಿಸುವಂತೆ ಕೆಎಸ್‌ಆರ್‌ಟಿಸಿ ಅಧಿಕಾರಿಗಳಿಗೆ ಸೂಚನೆ ನೀಡಿದ ಹಿನ್ನೆಲೆಯಲ್ಲಿ ಹೆಚ್ಚುವರಿಯಾಗಿ ಐದು ಮಾರ್ಗಗಳಲ್ಲಿ ಬಸ್‌ಗಳ ಸೇವೆಯನ್ನು ಆರಂಭಿಸಲಾಗಿದೆ. ಸಾರ್ವಜನಿಕರು ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕೆಂದು ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.

ಅವರು, ಭಾನುವಾರ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದಲ್ಲಿ ಚಳ್ಳಕೆರೆ, ಓಬಳಾಪುರ, ತಪ್ಪಗೊಂಡನಹಳ್ಳಿ, ನಾಯಕನಹಟ್ಟಿ ಮಾರ್ಗಗಳ ಹೆಚ್ಚುವರಿ ಬಸ್ ಸೇವೆಗೆ ಚಾಲನೆ ನೀಡಿ ಮಾತನಾಡಿದರು. ಗ್ರಾಮೀಣ ಭಾಗದ ಪ್ರಯಾಣಿಕರು ಹಲವಾರು ಬಾರಿ ಕೆಎಸ್‌ಆರ್‌ಟಿಸಿ ಬಸ್ ಸೌಕರ್ಯ ಒದಗಿಸುವಂತೆ ಮನವಿ ಮಾಡಿದ್ದರು. ಕೆಲವೊಂದು ಮಾರ್ಗಗಳಲ್ಲಿ ನಷ್ಟ ಉಂಟಾದರೂ ಸಾರ್ವಜನಿಕ ಹಿತದೃಷ್ಠಿಯಿಂದ ಬಸ್ ಓಡಿಸುವಂತೆ ಸೂಚನೆ ನೀಡಿದ್ದು, ಅದು ಇಂದು ಕಾರ್ಯಗತವಾಗಿದೆ ಎಂದರು. ಕೆಎಸ್‌ಆರ್‌ಟಿಸಿ ಡಿಸಿ ಶ್ರೀನಿವಾಸ್ ಮಾತನಾಡಿ, ಪ್ರಸ್ತುತ ಚಳ್ಳಕೆರೆ ಘಟಕದಲ್ಲಿ 71 ಬಸ್‌ಗಳನ್ನು ಸಾರ್ವಜನಿಕ ಸೇವೆಗಾಗಿ ಒದಗಿಸಲಾಗಿದೆ. ಶಾಸಕರ ಸೂಚನೆ ಮೇರೆಗೆ ಗ್ರಾಮೀಣ ಭಾಗದ ಪ್ರಯಾಣಿಕರ ಅನುಕೂಲಕ್ಕಾಗಿ ಹೆಚ್ಚುವರಿ ಬಸ್‌ಗಳ ಸೇವೆ ಕಲ್ಪಿಸಿದೆ. ಚಿತ್ರದುರ್ಗ ವಿಭಾಗಕ್ಕೆ ನೂತನವಾಗಿ 46 ಬಸ್ ನೀಡಿದ್ದು ಆ ಪೈಕಿ 5 ಬಸ್‌ಗಳನ್ನು ಇಲ್ಲಿಗೆ ನೀಡಲಾಗಿದೆ ಎಂದರು. ನಗರಸಭೆ ಅಧ್ಯಕ್ಷೆ ಜೈತುಂಬಿ, ಉಪಾಧ್ಯಕ್ಷೆ ಸುಜಾತ, ಸದಸ್ಯರಾದ ಎಂ.ಜೆ.ರಾಘವೇಂದ್ರ, ಬಿ.ಟಿ.ರಮೇಶ್‌ಗೌಡ, ಕೆ.ವೀರಭದ್ರಪ್ಪ, ನಾಮನಿರ್ದೇಶಕ ಆರ್.ವೀರಭದ್ರಪ್ಪ, ಡಿಪೋ ವ್ಯವಸ್ಥಾಪಕ ಪ್ರಭು, ಠಾಣಾ ಇನ್ಸ್‌ಪೆಕ್ಟರ್ ರಾಜಫಕ್ರುದ್ದೀನ್ ದೇಸಾಯಿ, ಪಿಎಸ್‌ಐ ಜೆ.ಶಿವರಾಜ್ ಮುಂತಾದವರು ಉಪಸ್ಥಿತರಿದ್ದರು.




ಚಳ್ಳಕೆರೆ ನಗರದ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದಲ್ಲಿ ನೂತನ ಹೆಚ್ಚುವರಿ ಮಾರ್ಗಗಳಿಗೆ ಐದು ಬಸ್‌ಗಳಿಗೆ ಚಾಲನೆ ನೀಡಿದ ಶಾಸಕ ಟಿ.ರಘುಮೂರ್ತಿ

## ಪ್ರಮುಖ ಸುದ್ದಿ

### ಸೆ.04ರಂದು ಬಿಎಸ್‌ಎಫ್ ನಿವೃತ್ತ ಯೋಧ ಡಿ.ತಿಪ್ಪೇಸ್ವಾಮಿಗೆ ಅಭಿನಂದನಾ ಸಮಾರಂಭ

# ಯೋಧನ ಸ್ವಾಗತಕ್ಕೆ ಜಿ.ಆರ್.ಹಳ್ಳಿ ಗ್ರಾಮಸ್ಥರಿಂದ ಸಿದ್ಧತೆ

» **ಚಿತ್ರದುರ್ಗ**

ಭಾರತೀಯ ಗಡಿಭದ್ರತಾ ಪಡೆಯಲ್ಲಿ (ಬಿಎಸ್‌ಎಫ್) ಸುಧೀರ್ಘ 22 ವರ್ಷ ದೇಶ ಸೇವೆ ಸಲ್ಲಿಸಿ ನಿವೃತ್ತರಾಗಿ ಸ್ವಗ್ರಾಮವಾದ ಚಿತ್ರದುರ್ಗ ತಾಲ್ಲೂಕಿನ ಗುಡ್ಡದ ರಂಗವ್ವನಹಳ್ಳಿ ಗ್ರಾಮಕ್ಕೆ ಸೆಪ್ಟೆಂಬರ್ 04ರಂದು ಬುಧವಾರ ಆಗಮಿಸುತ್ತಿರುವ ಡಿ.ತಿಪ್ಪೇಸ್ವಾಮಿ ಅವರ ವಿಜೃಂಭಣೆಯ ಸ್ವಾಗತಕ್ಕೆ ಗ್ರಾಮಸ್ಥರು ಸಿದ್ಧತೆ ಮಾಡಿಕೊಂಡಿದ್ದಾರೆ.

ಗ್ರಾಮದ ಶ್ರೀಮತಿ ದೊಡ್ಡಕ್ಕ ದಿ.ದಾಸಪ್ಪ ಅವರ ಅವರಿಗೆ ಮೂರು ಜನ ಮಕ್ಕಳು. ಅದರಲ್ಲಿ ಎರಡನೇ ಮಗ ಡಿ.ಜಯ್ಯಣ್ಣ ಅವರು 1993ರಲ್ಲಿ ಗಡಿಭದ್ರತಾ ಪಡೆಯಲ್ಲಿ 20 ವರ್ಷ 6 ತಿಂಗಳು ಸೇವೆ ಸಲ್ಲಿಸಿ ನಿವೃತ್ತರಾಗಿರುತ್ತಾರೆ. ಮೂರನೇ ಮಗ ಆದ ಡಿ.ತಿಪ್ಪೇಸ್ವಾಮಿ ಅವರು 2002ರಲ್ಲಿ ದೇಶಸೇವೆಗೆ ಸೇರಿ 22 ವರ್ಷ ಸೇವೆ ಸಲ್ಲಿಸಿದ್ದಾರೆ. ಡಿ.ತಿಪ್ಪೇಸ್ವಾಮಿ ಅವರು ಜಮ್ಮುಕಾಶ್ಮೀರ, ಛತ್ತೀಸ್ ಘಡ್, ಪಶ್ಚಿಮ ಬಂಗಾಳ, ತ್ರಿಪುರ ಸೇರಿದಂತೆ ವಿವಿಧ ರಾಜ್ಯದಲ್ಲಿಯೂ ಸೇವೆ ಸಲ್ಲಿಸಿದ್ದಾರೆ.










ದೇಶಸೇವೆ ಸಲ್ಲಿಸಿ ನಿವೃತ್ತರಾಗಿ ತಮ್ಮ ತಾಯ್ನಾಡಿಗೆ ಆಗಮಿಸುತ್ತರುವ ಡಿ.ತಿಪ್ಪೇಸ್ವಾಮಿ ಅವರಿಗೆ ಹೃದಯಪೂರ್ವ ಅಭಿನಂದನಾ ಸಮಾರಂಭವನ್ನು ಸೆಪ್ಟೆಂಬರ್ 04ರಂದು ಬೆಳಿಗ್ಗೆ 10.30ಕ್ಕೆ ಚಿತ್ರದುರ್ಗ ತಾಲ್ಲೂಕಿನ ಗುಡ್ಡದರಂಗವ್ವನಹಳ್ಳಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಹಮ್ಮಿಕೊಳ್ಳಲಾಗಿದೆ.

ಅಭಿನಂದನಾ ಸಮಾರಂಭಕ್ಕೆ ವಿಶೇಷ ಆಹ್ವಾನಿತರಾಗಿ ಚಿತ್ರದುರ್ಗ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ, ಮಾಜಿ ಶಾಸಕ ಜಿ.ಹೆಚ್.ತಿಪ್ಪಾರೆಡ್ಡಿ, ಗ್ರಾಮಾಂತರ ಠಾಣೆ ಇನ್ಸ್‌ಪೆಕ್ಟರ್ ಮುದ್ದರಾಜ, ಜಿ.ಆರ್.ಹಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷೆ ರುದ್ರಮ್ಮ, ಉಪಾಧ್ಯಕ್ಷೆ ವಿ.ಟಿ.ರೂಪ ಮಂಜುನಾಥ್, ಸದಸ್ಯರಾದ ಬಿ.ಎನ್. ಜ್ಯೋತಿ, ಟಿ.ರುದ್ರಸ್ವಾಮಿ, ಮಾರುತಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಆನಂದ್, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಕೆ.ಟಿ.ಗುರುಮೂರ್ತಿ, ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯ ಎನ್.ಬಿ.ಪ್ರಸನ್ನ, ಜಿ.ಆರ್.ಹಳ್ಳಿ ಗ್ರಾ.ಪಂ ಮಾಜಿ ಅಧ್ಯಕ್ಷ ಎ.ಕೆ. ಹೊನ್ನೂರಪ್ಪ, ಕೆಎಸ್‌ಎಫ್‌ಸಿ ಮ್ಯಾನೇಜರ್ ಆರ್.ಬಾಬು, ಚಿತ್ರದುರ್ಗ ಅರೆಸೇನ ಮಾಜಿ ಯೋಧರ ಸಂಘದ ಅಧ್ಯಕ್ಷ ಲಿಂಗರಾಜು, ಉಪಾಧ್ಯಕ್ಷ ಡಿ.ಜಯ್ಯಣ್ಣ, ಕಾರ್ಯದರ್ಶಿ ರವಿಶಂಕರ್, ಖಜಾಂಚಿ ಮಂಜುನಾಥ, ಮಾಜಿ ಸೈನಿಕರಾದ ಹಾಲಪ್ಪ ನಾಗಜ್ಜಿ, ಎನ್.ಬಿ.ಹನುಮಂತರೆಡ್ಡಿ, ಎನ್. ಜಯ್ಯಣ್ಣ, ವಿ.ಪಿ.ಸಂದೀಪ್ ಪಾಟೀಲ್, ಪಿ.ಆರ್.ಶ್ರೀನಿವಾಸರೆಡ್ಡಿ, ಜೋಡಿ ಚಿಕ್ಕೇನಹಳ್ಳಿ ಸರ್ಕಾರಿ ಪ್ರೌಢಶಾಲೆ ಮುಖ್ಯ ಶಿಕ್ಷಕ ಆರ್.ಸೋಮಣ್ಣ, ಮುಖ್ಯಶಿಕ್ಷಕಿ ನೇತ್ರಾವತಿ, ಜಿ.ಆರ್.ಹಳ್ಳಿಯ ಎಸ್‌ಡಿಎಂಸಿ ಅಧ್ಯಕ್ಷ ರಾಘು, ಉಪಾಧ್ಯಕ್ಷೆ ಶಿಲ್ಪಾ ಹಾಗೂ ಸದಸ್ಯರು ಭಾಗವಹಿಸುವರು.

## ಫಾಸ್ಟ್ ನ್ಯೂಸ್

### ವಿಶ್ವ ಹಿರಿಯ ನಾಗರಿಕರ ದಿನಾಚರಣೆ ಅಂಗವಾಗಿ ಕ್ರೀಡಾ, ಸಾಂಸ್ಕೃತಿಕ ಸ್ಪರ್ಧೆ



» ದಾವಣಗೆರೆ

ವಿಶ್ವ ಹಿರಿಯ ನಾಗರಿಕರ ದಿನಾಚರಣೆ ಅಂಗವಾಗಿ ಸೆಪ್ಟೆಂಬರ್ 8 ರಂದು ಬೆಳಿಗ್ಗೆ 10.30ಕ್ಕೆ ನಗರದ ಬಾಪೂಜಿ ಸ್ಕೂಲ್ ಮೈದಾನ ಎಂ.ಸಿ.ಸಿ.'ಬಿ' ಬ್ಲಾಕ್ ಇಲ್ಲಿ ಕ್ರೀಡಾ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳ ಉದ್ಘಾಟನಾ ಸಮಾರಂಭವನ್ನು ಆಯೋಜಿಸಲಾಗಿದೆ. ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ್. ಮಾ.ಕರೆಣ್ಣನವರು ಉದ್ಘಾಟಿಸುವರು. ಜಿಲ್ಲಾ ಹಿರಿಯ ನಾಗರಿಕರ ಸಂಘದ ಗೌ.ಕಾರ್ಯದರ್ಶಿ ಹಾಗೂ ಕರ್ನಾಟಕ ರಾಜ್ಯ ನಿವೃತ್ತ ನೌಕರರ ಸಂಘದ ಉಪಾಧ್ಯಕ್ಷರಾದ ಗುರುಮೂರ್ತಿ. ಎಸ್ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ರಾಜಾನಾಯ್ಕ. ಕೆ.ಎಸ್, ವಕೀಲರ ಸಂಘದ ಅಧ್ಯಕ್ಷರಾದ ಎಲ್. ಹೆಚ್ ಅರುಣಕುಮಾರ್, ಜಿಲ್ಲಾ ಸರ್ಕಾರಿ ನಿವೃತ್ತ ನೌಕರರ ಸಂಘದ ಅಧ್ಯಕ್ಷರಾದ ಭರತ್ ರಾಜ್. ಕೆ.ಜಿ, ಪೊಲೀಸ್ ನಿವೃತ್ತ ನೌಕರರ ಸಂಘದ ಕಾರ್ಯದರ್ಶಿ ರಾಜಣ್ಣ ಭಾಗವಹಿಸುವರು.

### ಅರ್ಬನ್ ಲರ್ನಿಂಗ್ ಇಂಟರ್ ಶಿಪ್ ಪ್ರೋಗ್ರಾಂಗೆ ಅರ್ಜಿ

» ದಾವಣಗೆರೆ

ದಾವಣಗೆರೆ ಮಹಾನಗರಪಾಲಿಕೆ ಡೇ-ನಲ್ಮ್ ಅಭಿಯಾನ ಮತ್ತು ಪಿ.ಎಂ ಸ್ವ-ನಿಧಿ ಯೋಜನೆಯಡಿ ಪಾಲಿಕೆ ವ್ಯಾಪ್ತಿಯಲ್ಲಿ ವಾಸವಿರುವ ಪದವಿ, ಸ್ನಾತಕೋತ್ತರ ಪದವಿ, ಡಿಪ್ಲೋಮಾ ವಿದ್ಯಾರ್ಹತೆ ಹೊಂದಿರುವ ಇಚ್ಛೆಯುಳ್ಳ ಅಭ್ಯರ್ಥಿಗಳಿಂದ ದಿ ಅರ್ಬನ್ ಲರ್ನಿಂಗ್ ಇಂಟರ್‌ಶಿಪ್ ಪ್ರೋಗ್ರಾಂಗೆ ಅರ್ಜಿ ಆಹ್ವಾನಿಸಲಾಗಿದೆ. ನಲ್ಮ್ ಯೋಜನೆ ಹಾಗೂ ಪಿ ಎಂ ಸ್ವ-ನಿಧಿ ಯೋಜನೆಯ ಬೀದಿ ಬದಿ ವ್ಯಾಪಾರಿಗಳ ಕುರಿತು ಅಧ್ಯಯನ ಮಾಡಿ ಜ್ಞಾನ ಮತ್ತು ಕೌಶಲ್ಯ ವೃದ್ಧಿಸಿಕೊಳ್ಳಲು ಅವಕಾಶವನ್ನು ಕಲ್ಪಿಸಿ, ಈ ಇಂಟರ್‌ಶಿಪ್ ಅವಧಿಯಲ್ಲಿ ಶಿಷ್ಯವೇತನವನ್ನು ನೀಡಲಾಗುತ್ತದೆ. https://internship.aicteindia.org/module_ulb/workspace.php?uid=INTERNSHIPGOV NULM 172474516466cd85cc9bf4f ಅರ್ಜಿ ಸಲ್ಲಿಸಬಹುದು. ಸೆ.30 ಅರ್ಜಿ ಸಲ್ಲಿಸಲು ಕೊನೆಯದಿನವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಮಹಾನಗರಪಾಲಿಕೆಯ ಡೇ-ನಲ್ಮ್ ಶಾಖೆಯ ಸಿಬ್ಬಂದಿಗಳನ್ನು ಸಂಪರ್ಕಿಸಲು ಪಾಲಿಕೆ ಆಯುಕ್ತರಾದ ರೇಣುಕಾ ತಿಳಿಸಿದ್ದಾರೆ.

### ವಿದ್ಯಾರ್ಥಿವೇತನಕ್ಕೆ ಅರ್ಜಿ

» ಚಿತ್ರದುರ್ಗ

2024-25ನೇ ಸಾಲಿಗೆ ರಾಜ್ಯ ವಿದ್ಯಾರ್ಥಿ ವೇತನ ತಂತ್ರಾಂಶದಲ್ಲಿ (ಎಸ್‌ಎಸ್‌ಪಿ ಪೋರ್ಟಲ್) ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರ ವಿದ್ಯಾರ್ಥಿವೇತನಕ್ಕೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅಕ್ಟೋಬರ್ 31 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಜಿಲ್ಲೆಯ ವ್ಯಾಪ್ತಿಯಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ವಿಕಲಚೇತನ ವಿದ್ಯಾರ್ಥಿಗಳು ತಾವುಗಳು ವ್ಯಾಸಂಗ ಮಾಡುತ್ತಿರುವ ಕಾಲೇಜು, ಶಿಕ್ಷಣ ಸಂಸ್ಥೆಗಳ ಮುಖಾಂತರ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರ ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸಬಹುದಾಗಿದೆ. ಮೆಟ್ರಿಕ್ ನಂತರ ವಿದ್ಯಾರ್ಥಿ ವೇತನಕ್ಕಾಗಿ ವೆಬ್‌ಸೈಟ್ https://ssp.postmatric.karnata.gov.in ಮತ್ತು ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನಕ್ಕೆ https://ssp.postmatric.karnataka.gov.in/ssppre/ ನಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು. ಅರ್ಹ ವಿಕಲಚೇತನ ವಿದ್ಯಾರ್ಥಿಗಳು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿದ ಒಂದು ಪ್ರತಿಯನ್ನು ಆಯಾ ತಾಲ್ಲೂಕು ಪಂಚಾಯಿತಿ ಕಾರ್ಯ ನಿರ್ವಹಿಸುತ್ತಿರುವ ವಿವಿದೊದ್ದೇಶ ಪುನರ್ವಸತಿ ಕಾರ್ಯಕರ್ತರು ಅಥವಾ ಗ್ರಾಮ ಪಂಚಾಯತಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರಿಗೆ ಸಲ್ಲಿಸಿ ಯೋಜನೆಯ ಸದುಪಯೋಗ ಪಡೆದುಕೊಳ್ಳಲು ಕೋರಿದೆ. ಹೆಚ್ಚಿನ ಮಾಹಿತಿಗಾಗಿ, ತಾಲ್ಲೂಕು ಪಂಚಾಯಿತಿ ಕಚೇರಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿದೊದ್ದೇಶ ಪುನರ್ವಸತಿ ಕಾರ್ಯಕರ್ತರ ದೂರವಾಣಿ ಸಂಖ್ಯೆ ಚಿತ್ರದುರ್ಗ-9880821934, ಚಳ್ಳಕೆರೆ-9611266930, ಹಿರಿಯೂರು-9902888901, 9902898901, ಹೊಳಲ್ಕೆರೆ-9740030227, ಹೊಸದುರ್ಗ-9741829990, ಮೊಳಕಾಲ್ಮೂರು-9742725576, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಚೇರಿಯ ದೂರವಾಣಿ ಸಂಖ್ಯೆ 08194-235284 ಗೆ ಸಂಪರ್ಕಿಸಬಹುದು.

## ಮಹರ್ಷಿ ವಾಲ್ಮೀಕಿಯವರ ಆದರ್ಶಗಳು ನಾಯಕ ಸಮುದಾಯದ ಸರ್ವತೋಮುಖ ಅಭಿವೃದ್ಧಿಗೆ ಸದಾಪ್ರೇರಣೆ

# ಪ್ರತಿಭಾಪುರಸ್ಕಾರ ವಿದ್ಯಾರ್ಥಿಗಳಿಗೆ ಸ್ಫೂರ್ತಿ: ಶಾಸಕ

» ಚಳ್ಳಕೆರೆ

ನಾಡಿನಎಲ್ಲಾಸಮುದಾಯಗಳಿಗೆಧಾರ್ಮಿಕ ವಿಚಾರಧಾರೆಗಳ ಬೆಳಕು ನೀಡಿ, ಉತ್ತಮ ಬದುಕು ಕಂಡುಕೊಳ್ಳುವ ಮಾರ್ಗತೋರಿದ ಮಹರ್ಷಿ ವಾಲ್ಮೀಕಿಯವರ ಹೆಸರಿನಲ್ಲಿ ಪ್ರಶಸ್ತಿ ಪ್ರಧಾನ ಮಾಡುವ ಮೂಲಕ ವಾಲ್ಮೀಕಿಯವರ ಮಾರ್ಗದಲ್ಲಿ ನಡೆಯುವ ಸಂದೇಶವನ್ನು ಸಾರಲಾಗಿದೆ. ವಿಶೇಷವಾಗಿ ನಾಯಕ ಸಮುದಾಯದ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಗುರುತಿಸಿ, ಗೌರವಿಸುವ ಕಾರ್ಯ ನಿರಂತರವಾಗಿ ಮುಂದುವರೆಯಲಿ. ಸಮಾಜದ ಎಲ್ಲರೊಂದಿಗೆ ಗೌರವ, ಪ್ರೀತಿ, ವಿಶ್ವಾಸದೊಂದಿಗೆ ಬೆರೆಯುವ ಈ ಸಮುದಾಯದ ಬಗ್ಗೆ ಸಮಾಜದಲ್ಲಿ ಎಲ್ಲರಲ್ಲೂ ಅಚಲವಾದ ವಿಶ್ವಾಸ ಬೇರೂರಿದೆ ಎಂದು ಶಾಸಕ, ಸಣ್ಣಕೈಗಾರಿಕೆ ಅಭಿವೃದ್ಧಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.

ಅವರು, ವಾಲ್ಮೀಕಿ ಕಲ್ಯಾಣಮಂಟಪದಲ್ಲಿ ನಾಯಕರ ವಿದ್ಯಾರ್ಥಿನಿಯಲ, ವಾಲ್ಮೀಕಿ ಕಲ್ಯಾಣಮಂಟಪ ಟ್ರಸ್ಟ್, ವಾಲ್ಮೀಕಿ ನಾಯಕ ನೌಕರರ ಕ್ಷೇಮಾಭಿವೃದ್ಧಿ ಸಂಘ, ವಾಲ್ಮೀಕಿ ಮಹಿಳಾ ಮಂಡಳಿ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಪ್ರತಿಭಾವಂತ ವಿದ್ಯಾರ್ಥಿಗಳ ಪ್ರತಿಭಾಪುಸ್ಕಾರ, ಸಮುದಾಯದ ನಿವೃತ್ತ ನೌಕರರ ಸನ್ಮಾನ ಕಾರ್ಯಕ್ರಮವನ್ನು ಜ್ಯೋತಿಬೆಳಗುವ ಮೂಲಕ ಉದ್ಘಾಟಿಸಿ ಮಾತನಾಡಿದರು. ನಾಯಕ ಸಮುದಾಯ ಕಳೆದ ಹಲವಾರು ದಶಕಗಳಿಂದ ಕಲ್ಯಾಣಮಂಟಪದ ಟ್ರಸ್ಟ್ ಮೂಲಕ ಜನಾಂಗದ ಸರ್ವತೋಮುಖ ಅಭಿವೃದ್ಧಿಗೆ ಹಲವಾರು ಯೋಜನೆ



ರೂಪಿಸುವ ಮೂಲಕ ಸಮುದಾಯದ ಜನರ ವಿಶ್ವಾಸವನ್ನು ಗಟ್ಟಿಗೊಳಿಸಿದೆ. ನಾಯಕ ಸಮಾಜ ರಾಜಕೀಯ ಕ್ಷೇತ್ರವೂ ಸೇರಿದಂತೆ ಎಲ್ಲಾ ಕ್ಷೇತ್ರದಲ್ಲೂ ಮುನ್ನಡೆ ಸಾಧಿಸಲಿ ಎಂದು ಆಶಿಸುವೆ. ನೂರಾರು ವಿದ್ಯಾರ್ಥಿಗಳು ತಮ್ಮದೇಯಾದ ಪ್ರತಿಭೆಯಿಂದ ಸನ್ಮಾನಿತರಾಗಿದ್ದಾರೆ. ಸೇವೆಯಿಂದ ನಿವೃತ್ತರಾದ ನೌಕರರನ್ನೂ ಸಹ ಅಭಿನಂದಿಸಲಾಗಿದೆ. ಇವೆರೆಲ್ಲರ ಬದುಕು ಉಜ್ವಲವಾಗಲಿ ಎಂದು ಶುಭಹಾರೈಸುವುದಾಗಿ ತಿಳಿಸಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ವಾಲ್ಮೀಕಿ ಕಲ್ಯಾಣಮಂಟಪ ಟ್ರಸ್ಟ್ ನಿರ್ದೇಶಕ, ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಜಿ.ಟಿ.ವೀರಭದ್ರಸ್ವಾಮಿ, ನಾಯಕ ಸಮುದಾಯ ಬಹುಮುಖಿ ಪ್ರತಿಭೆಗಳನ್ನು ಗುರುತಿಸಿ ಗೌರವಿಸುವ ಕಾರ್ಯವನ್ನು ಮಾಡುವ ಮೂಲಕ ಈ ಸಮುದಾಯದ ವಿದ್ಯಾರ್ಥಿಗಳು ಪ್ರತಿಭೆಯಿಂದ ವಂಚಿತರಾಗದಂತೆ ಕಾರ್ಯನಿರ್ವಹಿಸುತ್ತಿದೆ. ಕಳೆದ ಹಲವಾರು ವರ್ಷಗಳಿಂದ ಶಾಲಾ ವಿದ್ಯಾರ್ಥಿಗಳಿಗೆ ಉಚಿತ ನೋಟ್‌ಪುಸ್ತಕ, ಪೆನ್ನು ವಿತರಣೆ ಮಾಡುವುದಲ್ಲದೆ, ಸಮಾಜಮುಖಿ ಚಟುವಟಿಕೆಗಳಿಗೂ ಸಹ ಸಹಕಾರ ನೀಡಲಾಗುತ್ತಿದೆ ಎಂದರು. ನಾಯಕ ಸಮುದಾಯದ ಕ್ರಿಯಾಶೀಲತೆಯ ಬಗ್ಗೆ ಸಹಾಯಕ ವಾಣಿಜ್ಯತೆರಿಗೆ ಆಯುಕ್ತ ಎ.ತಿಪ್ಪಾನಾಯಕ, ಕೆಎಂಎಫ್ ಜಂಟಿ ನಿರ್ದೇಶಕ ತಿಪ್ಪೇಸ್ವಾಮಿ, ಉಪಅರಣ್ಯ ಸಂರಕ್ಷಣಾಧಿಕಾರಿ ಟಿ.ರಾಜಣ್ಣ, ಪಿಟಿಎಸ್‌ಮಾಸ್ಟರ್, ವಾಲ್ಮೀಕಿ ನೌಕರರ ಕ್ಷೇಮಾಭಿವೃದ್ಧಿ ಸಂಘ ಜಿಲ್ಲಾಧ್ಯಕ್ಷ ಪಿ.ಕೆ.ಸದಾನಂದ ಮುಂತಾದವರು ಮಾತನಾಡಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ನಾಯಕರ ವಿದ್ಯಾರ್ಥಿನಿಯಲಹಾಗೂ ವಾಲ್ಮೀಕಿ ಕಲ್ಯಾಣಮಂಟಪ ಟ್ರಸ್ಟ್ ಅಧ್ಯಕ್ಷ ಎಚ್. ಮಲ್ಲಪ್ಪನಾಯಕ ಮಾತನಾಡಿ, ಕಳೆದ 1965ರಲ್ಲಿ ಕಲ್ಯಾಣಮಂಟಪ ಆರಂಭದ ಮೂಲಕ ಸಮಾಜದ ಚಟುವಟಿಕೆಗೆ ಚಾಲನೆ ನೀಡಲಾಗಿದೆ. ಈ ಸಮುದಾಯದ ಹಿರಿಯ ಮುಖಂಡ ದಿವಂಗತ ಸೂರನಾಯಕ, ಮಾಜಿ ಸಚಿವ ತಿಪ್ಪೇಸ್ವಾಮಿ ಮುಂತಾದವರ ನಿಸ್ವಾರ್ಥಸೇವೆ ಫಲವಾಗಿ ಇಂದು ಈ ಸಮಾಜ ಉನ್ನತ್ತಮಟ್ಟಕ್ಕೆ ಬೆಳೆದಿದೆ. ನಾಯಕ ಸಮಾಜದ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಚಿತ್ರದುರ್ಗ ರಸ್ತೆಯಲ್ಲಿ ಒಂದು ಕೋಟಿ ವೆಚ್ಚದಲ್ಲಿ ಸುಸಜ್ಜಿತ ವಿದ್ಯಾರ್ಥಿನಿಯಲವನ್ನು ನಿರ್ಮಾಣ ಮಾಡಲಾಗುತ್ತಿದೆ. ನಮ್ಮ ಎಲ್ಲಾ ಕಾರ್ಯಕ್ರಮಗಳಿಗೆಆಡಳಿತಮಂಡಳಿಯೂ ಸೇರಿದಂತೆ ಇಡೀ ಸಮುದಾಯ ನಮ್ಮ ಬೆನ್ನಹಿಂದೆ ನಿಂತು ನಮ್ಮನ್ನು ಪ್ರೋತ್ಸಾಹಿಸುತ್ತಿದೆ. ಸಮಾಜದ ಎಲ್ಲರಿಗೂ ನನ್ನ ಅಭಿನಂದನೆಗಳು ಎಂದರು.

ಕಾರ್ಯಕ್ರಮದಲ್ಲಿ ನಗರಸಭಾ ಅಧ್ಯಕ್ಷೆ ಜೈತುಂಬಿ, ಉಪಾಧ್ಯಕ್ಷೆ ಸುಜಾತ, ಕಲ್ಯಾಣಮಂಟಪ ಟ್ರಸ್ಟ್ ಕಾರ್ಯದರ್ಶಿ ಸಿ.ಕೆ.ರಂಗಸ್ವಾಮಿ, ಹಾಸ್ಟಲ್ ಕಾರ್ಯದರ್ಶಿ ದುಗ್ಗಾವರತಿಪ್ಪೇಸ್ವಾಮಿ, ನಿರ್ದೇಶಕರಾದ ಆರ್.ಪಾಪಣ್ಣ, ಬಾಳೆಮಂಡಿರಾಮದಾಸ್, ಟಿ.ಶಿವಕುಮಾರ್, ಜೆ.ರಘುವೀರನಾಯಕ, ಬೋರಯ್ಯ, ಕೆ.ಬಿ.ಪ್ರಭಾಕರ, ಬಿಇಒ ಕೆ.ಎಸ್.ಸುರೇಶ್, ವಾಲ್ಮೀಕಿ ನಾಯಕ ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಸಿ.ಟಿ.ವೀರೇಶ್, ಕಾರ್ಯದರ್ಶಿ ಡಾ.ಡಿ.ಎನ್.ರಘುನಾಥ,ಮಹಿಳಾ ಸಂಘದ ಅಧ್ಯಕ್ಷೆ ಯಶೋಧಮ್ಮ, ಕಾರ್ಯದರ್ಶಿ ಎಚ್.ಎಂ.ಸೂರ್ಯಪ್ರಭಾ, ಉಪಮುಖ್ಯ ವಿದ್ಯುತ್ ಪರಿವೀಕ್ಷಕ ಜೆ.ಎಚ್.ಶ್ರೀನಿವಾಸ್, ಸಹಾಯಕ ಅರಣ್ಯಸಂರಕ್ಷಣಾಧಿಕಾರಿ ಎಸ್.ಸುರೇಶ್, ವಾಣಿಜ್ಯತೆರಿಗೆ ಅಧಿಕಾರಿ ಮಂಜಣ್ಣ, ಅಜ್ಜಣ್ಣ, ನಗರಸಭಾ ಸದಸ್ಯರಾದ ಕವಿತಾಬೋರಯ್ಯ, ಡಾ.ನಾಗೇಂದ್ರ ನಾಯಕ, ಸೌಭಾಗ್ಯಮ್ಮ, ಕರವೆ ಅಧ್ಯಕ್ಷ ಟಿ.ಜೆ. ವೆಂಕಟೇಶ್, ಓ.ರಾಮಣ್ಣ, ಬೋರಯ್ಯ, ಪ್ರಶಾಂತ್‌ನಾಯಕ, ವಿಷಯ ಪರಿವೀಕ್ಷಕ ಗೋವಿಂದಪ್ಪ ಭಾಗವಹಿಸಿದ್ದರು.

# ಮದಕರಿಪುರ: ಮಳೆ ನೀರು ಕೊಯ್ಲು ತರಬೇತಿ

» ಚಿತ್ರದುರ್ಗ

ಚಿತ್ರದುರ್ಗ ತಾಲ್ಲೂಕಿನ ಮದಕರಿಪುರ ಗ್ರಾಮದಲ್ಲಿ ಈಚೆಗೆ ಜಲಜೀವನ್ ಮಿಷನ್ ಯೋಜನೆ ಯೋಜನೆ ಹಾಗೂ ಸ್ವಚ್ಛ ಭಾರತ್ ಮಿಷನ್ ಯೋಜನೆಯ ಮಳೆ ನೀರು ಕೊಯ್ಲು ಹಾಗೂ ಬೂದು ನೀರು ನಿರ್ವಹಣೆ ಕುರಿತು ತರಬೇತಿ ನೀಡಲಾಯಿತು.


ಜಿಲ್ಲಾ ಪಂಚಾಯತ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಅನುಷ್ಠಾನ ಬೆಂಬಲ ಸಂಪನ್ಮೂಲ ಸಂಸ್ಥೆ (ರೀಡ್ಸ್) ಇವರ ಸಹಯೋಗದಲ್ಲಿ ತರಬೇತಿ ಕಾರ್ಯಕ್ರಮ ನಡೆಯಿತು.

ಜಿಲ್ಲಾಕಾರ್ಯಕ್ರಮವ್ಯವಸ್ಥಾಪಕಮಂಜುನಾಥ್ ಎಸ್ ನಾಡರ ಮಾತನಾಡಿ, ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಗ್ರಾಮಗಳಲ್ಲಿ ಜಲ ಜೀವನ್ ಮಿಷನ್ ಯೋಜನೆಯ ನಳಸಂಪರ್ಕ ಕಲ್ಪಿಸಲಾಗುತ್ತಿದೆ. ಪ್ರತಿ ವ್ಯಕ್ತಿಗೆ 55 ಲೀಟರ್ ಶುದ್ಧ ಹಾಗೂ ಸುರಕ್ಷಿತ ನೀರು ಕೊಡಲಾಗುತ್ತಿದ್ದು, ಅದನ್ನು ಸದುಪಯೋಗ ಪಡಿಸಿಕೊಳ್ಳಬೇಕು ಎಂದು ತಿಳಿಸಿದರು. ಗ್ರಾಮ ಪಂಚಾಯಿತಿಯಿಂದ ಜಲ ಜೀವನ್ ಮಿಷನ್ ಯೋಜನೆ ಹಾಗೂ ಸ್ವಚ್ಛ ಭಾರತ್ ಮಿಷನ್ ಯೋಜನೆಯ ವಿವಿಧ



ಘಟಕಾಂಶಗಳನ್ನು ಅನುಷ್ಠಾನ ಮಾಡಲಾಗುತ್ತಿದೆ. ಎಲ್ಲಾ ಗ್ರಾಮ ಪಂಚಾಯಿತಿ ಸದಸ್ಯರು ಮತ್ತು ಗ್ರಾಮ ನೀರು ಮತ್ತು ನೈರ್ಮಲ್ಯ ಸಮಿತಿ ಸದಸ್ಯರು ಇದರ ಬಗ್ಗೆ ಮಾಹಿತಿ ತಿಳಿದುಕೊಂಡು ಅಭಿವೃದ್ಧಿಗೆ ಸಹಕಾರ ನೀಡಬೇಕು ಎಂದು ತಿಳಿಸಿದರು.ಜಲ ಜೀವನ್ ಮಿಷನ್ ಯೋಜನೆಯ ತಾಲೂಕು ಸಮುದಾಯ ಸಂಘಟಕ ಡಾ. ಜಿ.ಎಸ್.ನಾಗರಾಜ ಮಾತನಾಡಿ, ಜಲ ಜೀವನ್ ಮಿಷನ್ ಯೋಜನೆ ಹಾಗೂ ಮಳೆ ನೀರು ಕೊಯ್ಲು ಮತ್ತು ಬೂದು ನೀರು ನಿರ್ವಹಣೆ ಯೋಜನೆಯ ಬಗ್ಗೆ ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಬಸವರಾಜ, ಸದಸ್ಯ ತಿಪ್ಪೇಸ್ವಾಮಿ ನಾಯಕ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ ನಾಗರಾಜ್ ಹಾಗೂ ಗ್ರಾಮ ನೀರು ಮತ್ತು ನೈರ್ಮಲ್ಯ ಸಮಿತಿ ಸದಸ್ಯರು, ಅಂಗನವಾಡಿ ಕಾರ್ಯಕರ್ತೆಯರು ಮತ್ತು ಆಶಾ ಕಾರ್ಯಕರ್ತೆಯರು, ನೀರುಗಂಟಿಗಳು ಹಾಜರಿದ್ದರು.



ಚಳ್ಳಕೆರೆ ನಗರದ ನಗರಸಭೆ ನೂತನ ಅಧ್ಯಕ್ಷೆ ಜೈತುಂಬಿ, ಉಪಾಧ್ಯಕ್ಷೆ ಸುಜಾತ ಅಧಿಕಾರ ಪದಗ್ರಹಣ ಕಾರ್ಯಕ್ರಮ ಭಾನುವಾರ ನಡೆಯಿತು. ಶಾಸಕ ಟಿ.ರಘುಮೂರ್ತಿ, ಸದಸ್ಯರು, ಅಧಿಕಾರಿಗಳು ಭಾಗವಹಿಸಿದ್ದರು.

## ಯಾವುದೆ ಒಂದು ಸಮಾಜ ಅಭಿವೃದ್ಧಿಯಾಗಬೇಕಾದರೆ ಶೈಕ್ಷಣಿಕ ಜಾಗೃತಿಯಿರಬೇಕು: ಸ್ವಾಮೀಜಿ



**ಚಿತ್ರದುರ್ಗ:** ಯಾವುದೆ ಒಂದು ಸಮಾಜ ಅಭಿವೃದ್ಧಿಯಾಗಬೇಕಾದರೆ ಶೈಕ್ಷಣಿಕ ಜಾಗೃತಿಯಿರಬೇಕು. ಶಿಕ್ಷಣವಿಲ್ಲದ ಸಮುದಾಯ ಮುಂದುವರೆಯಲು ಸಾಧ್ಯವಿಲ್ಲ. ಹಿಂದುಳಿದ ಸಮಾಜದಲ್ಲಿ ಶೈಕ್ಷಣಿಕ ಜಾಗೃತಿ ಮೂಡುತ್ತಿದೆ ಎಂದು ಹೊಸದುರ್ಗ ಕಾಗಿನೆಲೆ ಕನಕ ಗುರುಪೀಠದ ಈಶ್ವರಾನಂದಪುರಿ ಸ್ವಾಮೀಜಿ ಹೇಳಿದರು. ತಾಲ್ಲೂಕು ಕನಕ ನೌಕರರ ಕ್ಷೇಮಾಭಿವೃದ್ಧಿ ಸಂಘ ಹಾಗೂ ಜಿಲ್ಲಾ ಕುರುಬರ ಸಂಘದಿಂದ 2023-2024 ನೇ ಸಾಲಿನಲ್ಲಿ ಎಸ್.ಎಸ್.ಎಲ್.ಸಿ. ಹಾಗೂ ದ್ವಿತೀಯ ಪಿ.ಯು.ಸಿ.ಯಲ್ಲಿ ಅತಿ ಹೆಚ್ಚಿನ ಅಂಕಗಳನ್ನು ಗಳಿಸಿರುವ ಕುರುಬ ಸಮಾಜದ ವಿದ್ಯಾರ್ಥಿಗಳಿಗೆ ಸರ್ಕಾರಿ ನೌಕರರ ಭವನದಲ್ಲಿ ಭಾನುವಾರ ಹಮ್ಮಿಕೊಳ್ಳಲಾಗಿದ್ದ ಪ್ರತಿಭಾ ಪುರಸ್ಕಾರ ಸಮಾರಂಭದ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿದರು.

ನಮ್ಮ ಸಮುದಾಯದಲ್ಲಿ ಅನೇಕ ಪ್ರತಿಭಾವಂತರಿದ್ದಾರೆ. ಆದರೆ ಜನಾಂಗ, ಸಂಘಟನೆಗಳು ಗುರುತಿಸಿ ಪ್ರೋತ್ಸಾಹಿಸುವಲ್ಲಿ ಹಿಂದೆ ಬಿದ್ದಿವೆ. ತಾತ್ಸಾರ ಮನೋಭಾವನೆ ಬೇಡ. 2002 ರಲ್ಲಿ ಆರಂಭಗೊಂಡ ಪ್ರತಿಭಾ ಪುರಸ್ಕಾರದಲ್ಲಿ 25 ವಿದ್ಯಾರ್ಥಿಗಳನ್ನು ಗೌರವಿಸಿ ಪ್ರೋತ್ಸಾಹಿಸಲಾಯಿತು. ಅಂದಿನಿಂದ ಇಲ್ಲಿಯವರೆಗೂ ಪ್ರತಿ ವರ್ಷ ನಿರಂತರವಾಗಿ ನಡೆದುಕೊಂಡು ಬರುತ್ತಿದೆ. ಕುರುಬ ಜನಾಂಗದಲ್ಲಿ ಗೋಲ್ಡ್ ಮೆಡಲಿಸ್ಟ್‌ಗಳಿದ್ದಾರೆ. ಅಂತಹವರನ್ನು ಗುರುತಿಸಿ ಬೆಳಕಿಗೆ ತರುವ ಕೆಲಸವಾಗಬೇಕು. ನಮ್ಮ ಸಮುದಾಯದಲ್ಲಿ ಬಡವರಿರಬಹುದು. ಆದರೆ ಪ್ರತಿಭಾವಂತರಿಗೆ ಕೊರತೆಯಿಲ್ಲ. ಪ್ರತಿಭಾವಂತ ಮಕ್ಕಳನ್ನು ಸನ್ಮಾನಿಸಿ ಆರ್ಥಿಕ ಸಹಾಯ ಮಾಡಿದರೆ ಬೇರೆಯವರಿಗೆ ಪ್ರೇರಣೆ ನೀಡಿದಂತಾಗುತ್ತದೆ. ಎಂಟು ಲಕ್ಷ ರೂ.ಗಳನ್ನು ಸಂಗ್ರಹ ಮಾಡಿ ಬ್ಯಾಂಕ್‌ನಲ್ಲಿ ಠೇವಣಿ ಇಡಲಾಗಿದೆ. ಇದಕ್ಕೆ ಜನಾಂಗದ ಪ್ರತಿಯೊಬ್ಬರು ಆರ್ಥಿಕ ನೆರವು ಸೇರಿಸಿದರೆ ಪ್ರತಿ ವರ್ಷವೂ ದೊಡ್ಡ ಮಟ್ಟದಲ್ಲಿ ಪ್ರತಿಭಾ ಪುರಸ್ಕಾರವನ್ನು ಮಾಡಲು ಸಹಾಯವಾಗಲಿದೆ ಎಂದು ಮನವಿ ಮಾಡಿದರು.

## ಪ್ರಮುಖ ಸುದ್ದಿ

# ನಗರದಲ್ಲಿ ಮೈಲಾರ ಲಿಂಗೇಶ್ವರ ದೇವಸ್ಥಾನ ಉದ್ಘಾಟನೆ

» ಚಿತ್ರದುರ್ಗ

ಮೈಲಾರ ಲಿಂಗೇಶ್ವರಸ್ವಾಮಿ ಕೇವಲ ಕರ್ನಾಟಕದಲ್ಲಷ್ಟೆ ಅಲ್ಲ. ದಕ್ಷಿಣ ಭಾರತದ ಹಲವು ಜಿಲ್ಲೆಗಳಲ್ಲಿ ಪ್ರಸಿದ್ಧಿ ಪಡೆದಿದೆ ಎಂದು ಮಾದಾರ ಚನ್ನಯ್ಯ ಗುರುಪೀಠದ ಬಸವಮೂರ್ತಿ ಸ್ವಾಮೀಜಿ ಗುಣಗಾನ ಮಾಡಿದರು.

ಮೈಲಾರ ಲಿಂಗೇಶ್ವರ ದೇವಸ್ಥಾನ ಜೀರ್ಣೋದ್ದಾರ ಅಭಿವೃದ್ಧಿ ಸಮಿತಿಯಿಂದ ಬುರುಜಿನಹಟ್ಟಿ ಉಪ್ಪುನೀರು ಬಾವಿ ರಸ್ತೆಯಲ್ಲಿ ನಿರ್ಮಾಣವಾಗಿರುವ ಮೈಲಾರ ಲಿಂಗೇಶ್ವರಸ್ವಾಮಿಗಂಗಮಾಳಮ್ಮದೇವಿಯ ದೇವಸ್ಥಾನ ಹಾಗೂ ಸಮುದಾಯ ಭವನ ಉದ್ಘಾಟಿಸಿ ಆಶೀರ್ವಚನ ನೀಡಿದರು.

ಮೈಲಾರ ಲಿಂಗೇಶ್ವರಸ್ವಾಮಿ ದೇವಸ್ಥಾನ ಸುಂದರವಾಗಿ ನಿರ್ಮಾಣವಾಗಿರುವುದರ ಹಿಂದೆ ನಿಶಾನಿ ಕುಟುಂಬದವರ ಪರಿಶ್ರಮವಿದೆ. ಮೈಲಾರ ಕಾರ್ಣಿಕ ನಾಡಿನಾದ್ಯಂತ ಹೆಸರುವಾಸಿ. ದೋಣಿ ಸೇವೆಯಲ್ಲಿ ನಮ್ಮವರ ಪಾತ್ರ ದೊಡ್ಡದು ಎಂದು ಹೇಳಿದರು.



ಗೋವಿಂದ ಕಾರಜೋಳರವರು ಚಿತ್ರದುರ್ಗ ಕ್ಷೇತ್ರದಿಂದ ಪಾರ್ಲಿಮೆಂಟ್ ಚುನಾವಣೆಗೆ ನಿಂತು ಗೆಲ್ಲುತ್ತಾರೆಂದು ಯಾರು ನಿರೀಕ್ಷಿಸಿರಲಿಲ್ಲ. ಬಿ.ಎಸ್. ಯಡಿಯೂರಪ್ಪನವರ ಸರ್ಕಾರದಲ್ಲಿ ಉಪ ಮುಖ್ಯಮಂತ್ರಿಯಾಗಿ ಅನೇಕ ಉತ್ತಮ ಕೆಲಸಗಳನ್ನು ಮಾಡಿದ್ದಾರೆ. ಚಿತ್ರದುರ್ಗದಲ್ಲಿ ಮಾದಾರ ಚನ್ನಯ್ಯ ಮಠ ತಲೆ ಎತ್ತಲು ಸಂಸದರು ಕಾರಣ ಎಂದು ಸ್ಮರಿಸಿದರು.

ನಗರಸಭೆ ಅಧ್ಯಕ್ಷ ಸ್ಥಾನ ಹುಟ್ಟಿಕೊಂಡಿದ್ದೆ ಬುರುಜನಹಟ್ಟಿಯಿಂದ. ಎಲ್ಲಾ ಪಕ್ಷಗಳು ಇಲ್ಲಿವೆ. ಈ ಭಾಗದಲ್ಲಿ ಮನೆ ಕಟ್ಟಿಕೊಂಡಿರುವವರಿಗೆ ಇ.ಸ್ವತ್ತಾಗಲಿ, ಖಾತೆ ಹೀಗೆ ಯಾವುದೇ ಮೂಲಭೂತ ಸೌಲಭ್ಯಗಳು ಸಿಗುತ್ತಿಲ್ಲ. ಪುರಾತತ್ವ ಇಲಾಖೆಯಿಂದ ಅನೇಕ ಸಮಸ್ಯೆಗಳಿವೆ. ಹಾಗಾಗಿ ಕೇಂದ್ರ ಸರ್ಕಾರದಲ್ಲಿ ಮಾತನಾಡಿ ಬುರುಜನಹಟ್ಟಿ ನಿವಾಸಿಗಳಿಗೆ ಸೌಲಭ್ಯ ದೊರಕಿಸಿಕೊಡುವಂತೆ ಸಂಸದ ಗೋವಿಂದ ಕಾರಜೋಳರವರಲ್ಲಿ ಸ್ವಾಮೀಜಿ ಮನವಿ ಮಾಡಿದರು.

ದೇವಸ್ಥಾನದ ಸಂಸ್ಥಾಪಕರಾದ ದಿ.ನಿಶಾನಿ ಲಕ್ಷ್ಮಮ್ಮ, ದಿ.ನಿಶಾನಿ ಮಲ್ಲಪ್ಪ ಇವರುಗಳ ಭಾವಚಿತ್ರ ಅನಾವರಣಗೊಳಿಸಿ ಮಾತನಾಡಿದ ಸಂಸದ ಗೋವಿಂದ ಕಾರಜೋಳರವರು ಪುರಾತತ್ವ ಇಲಾಖೆಯ ನಿಯಮವೇನಿದೆ ಎನ್ನುವುದನ್ನು ನೋಡಿಕೊಂಡು ಬುರುಜನಹಟ್ಟಿ ನಿವಾಸಿಗಳ ಸಮಸ್ಯೆಗಳಿಗೆ ಸ್ಪಂದಿಸುತ್ತೇನೆ. ಇಲ್ಲಿಯವರೆಗೂ ಏನೇನು ದಾಖಲೆಗಳನ್ನು ಸಲ್ಲಿಸಿ ಪತ್ರ ವ್ಯವಹರಿಸಿದ್ದೀರಿ ಎನ್ನುವ ಮಾಹಿತಿ ಕೊಡಿ. ಮೈಲಾರಲಿಂಗೇಶ್ವರಸ್ವಾಮಿ ಗಂಗಮಾಳಮ್ಮ ದೇವಸ್ಥಾನ ಹಾಗೂ ಸಮುದಾಯ ಭವನ ಭವ್ಯವಾಗಿ ನಿರ್ಮಾಣವಾಗಿರುವುದು ಇಲ್ಲಿನ ನಿವಾಸಿಗಳಿಗೆ ಅನುಕೂಲವಾಗಲಿದೆ ಎಂದು ಹೇಳಿದರು. ದೇವಸ್ಥಾನ ಕಾರ್ಯಕಾರಿ ಸಮಿತಿ ಅಧ್ಯಕ್ಷ ಜಿ.ಸಿ.ಸುರೇಶ್‌ಬಾಬು, ಪ್ರಧಾನ ಕಾರ್ಯದರ್ಶಿ ಎಂ.ನಿಶಾನಿ ಜಯಣ್ಣ, ಗೌರವಾಧ್ಯಕ್ಷ ಎಸ್.ಕೃಷ್ಣಮೂರ್ತಿ, ಉಪಾಧ್ಯಕ್ಷ ವಿಜಯಕುಮಾರ್ ಪಿ.ಎಸ್. ನಗರಸಭೆ ಅಧ್ಯಕ್ಷೆ ಸುಮಿತಾ ಈರುಳ್ಳಿರಘು, ಸದಸ್ಯೆ ಪಿ.ಕೆ.ಮೀನಾಕ್ಷಿ, ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷೆ ಶಶಿಕಲಾ ಕಂದಿಕೆರೆ ಸುರೇಶ್‌ಬಾಬು ವೇದಿಕೆಯಲ್ಲಿದ್ದರು.

ನಿರ್ದೇಶಕರುಗಳಾದ ಎಂ .ಮಲ್ಲಿಕಾರ್ಜುನ್, ಚಂದ್ರಪ್ಪ, ಶಿವಕುಮಾರ್ ಪಿ.ಎಲ್. ನಿಶಾನಿ ಧನುಷ್, ಬಿ.ಎಂ. ನಾಗರಾಜ್‌ಬೇದ್ರೆ, ಉದಯರವಿ ಟಿ. ಕೆ.ಗೋಪಿನಾಥ್, ನಿಶಾನಿ ಮಾಲತೇಶ್‌ಹಾಜರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T